ಸುದ್ದಿ ಸಿಂಚನ

ಕಲ್ಪೋತ್ಸವ-2026 ಇಂದಿನಿಂದ ಆರಂಭ



ತಿಪಟೂರು: ನಗರದ ಕಲ್ಪತರು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಕಲ್ಪೋತ್ಸವ-2026 ಶುಕ್ರವಾರ ಹಾಗೂ ಶನಿವಾರ ನಡೆಯಲಿದೆ. 8ರ ಶುಕ್ರವಾರ ನಡೆಯಲಿರುವ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆಯನ್ನು ಕೆ.ವಿ.ಎಸ್. ಅಧ್ಯಕ್ಷರಾದ ಪಿ.ಕೆ.ತಿಪ್ಪೇರುದ್ರಪ್ಪ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಖ್ಯಾತ ಕನ್ನಡ ಲೇಖಕಿ ಹಾಗೂ ಪತ್ರಕರ್ತೆ ಸಂಧ್ಯಾ ರಾಣಿ ಎನ್. ಇವರು ಆಗಮಿಸಲಿದ್ದಾರೆ. ಸಂಜೆ 6ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಚಿತ್ರನಟಿ ಪಲ್ಲವಿ ಪರ್ವ ಹಾಗೂ ಚಿತ್ರನಟರಾದ ಸುಧಾಕರಗೌಡ ಮತ್ತು ಕಾರ್ತಿಕ್ ರೂವಾರಿ ವಿಶೇಷ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. 9ರ ಶನಿವಾರ ಸಂಜೆ 7.30ಕ್ಕೆ ಈ ಕಾರ್ಯಕ್ರಮದ ಸಮಾರೋಪ ಸಮಾರಂಭ ನಡೆಯಲಿದ್ದು ಅಧ್ಯಕ್ಷತೆಯನ್ನು ಕೆ.ವಿ.ಎಸ್. ಅಧ್ಯಕ್ಷರಾದ ಪಿ.ಕೆ.ತಿಪ್ಪೇರುದ್ರಪ್ಪ ವಹಿಸಲಿದ್ದಾರೆ. ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಕನ್ನಡ ರ್‍ಯಾಪರ್ ಆದ ರಾಹುಲ್ ಡಿಟ್-ಒ ಆಗಮಿಸಲಿದ್ದು ಇವರಿಂದ ಲೈವ್ ಮ್ಯೂಸಿಕ್ ನೈಟ್ ಆಯೋಜಿಸಲಾಗಿದೆ. ಈ ಎರಡು ದಿನಗಳ ಕಾರ್ಯಕ್ರಮದಲ್ಲಿ ಕೆ.ವಿ.ಎಸ್. ಉಪಾಧ್ಯಕ್ಷರಾದ ಬಾಗೇಪಲ್ಲಿ ನಟರಾಜು, ಜಿ.ಪಿ.ದೀಪಕ್, ಬಿ.ಎಸ್. ಉಮೇಶ್, ಟಿ.ಎಸ್. ಬಸವರಾಜು, ಕಾರ್ಯದರ್ಶಿಗಳಾದ ಜಿ.ಎಸ್. ಉಮಾಶಂಕರ್, ಎಂ.ಆರ್. ಸಂಗಮೇಶ್, ಸುಧಾಕರ್‌ಎಚ್.ಜಿ., ಟಿ.ಯು. ಜಗದೀಶಮೂರ್ತಿ, ಖಜಾಂಚಿಯಾದ ಟಿ.ಎಸ್. ಶಿವಪ್ರಸಾದ್ ಸೇರಿದಂತೆ ಕೆ.ಐ.ಟಿ. ಪ್ರಾಂಶುಪಾಲರಾದ ಡಾ. ಹೆಚ್.ಸಿ.ಸತೀಶ್ ಕುಮಾರ್, ವಿವಿಧ ವಿಭಾಗಗಳ ಮುಖ್ಯಸ್ಥರುಗಳು, ಬೋಧಕ, ಬೋಧಕೇತರರು ಹಾಗೂ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಭಾಗವಹಿಸಲಿದ್ದಾರೆ.

ರೋಮಾಂಚಕ ಘಟ್ಟದತ್ತ ತುಮಕೂರು ಓಪನ್

ಅಗ್ರ ಶ್ರೇಯಾಂಕಿತ ವೈದೇಹಿ ಚೌದರಿ, ಜುರ್ಝಾನ್ನಾ ಪಾವ್ಲಿಕೋವ್‌ಸ್ಕಾ ಸೆಮಿಫೈನಲ್‌ಗೆ | ಗೆಲುವು ದಾಖಲಿಸಿದ ಜಸ್ಟಿನಾ ಮಿಕುಲ್‌ಸ್ಕೈಟ್

• **ಕನ್ನಡಪ್ರಭ ವಾರ್ತೆ** ತುಮಕೂರು

ತುಮಕೂರು ಜಿಲ್ಲಾ ಟೆನಿಸ್ ಕೋರ್ಟ್ ನಲ್ಲಿ ಗುರುವಾರ ನಡೆದ ರೋಮಾಂಚಕಾರಿ ಪಂದ್ಯಗಳ ನಂತರ ಎಲ್ಲಾ ಅಗ್ರ ಶ್ರೇಯಾಂಕಿತರು ಸಿಂಗಲ್ಸ್ ಕ್ವಾರ್ಟರ್ ಫೈನಲ್ಸ್‌ಗೆ ಲಗ್ಗೆಯಿಡುವುದರೊಂದಿಗೆ ತುಮಕೂರು ಓಪನ್ ಐಟಿಎಫ್ ಡಬ್ಲ್ಯು35 ನಲ್ಲಿ ರೋಮಾಂಚನಕಾರಿ ವೇದಿಕೆ ಸಜ್ಜಾಗಿದೆ.

ಅಗ್ರ ಶ್ರೇಯಾಂಕಿತ ಆಟಗಾರ್ತಿ ಜಸ್ಟಿನಾ ಮಿಕುಲ್‌ಸ್ಕೈಟ್ ಪೋಲೆಂಡ್ ನ ಜುರ್ಝಾನ್ನಾ ಕೊಲೊನಸ್ ವಿರುದ್ಧ ನಾಟಕೀಯ ಆರಂಭವನ್ನು ಪಡೆದು 0-6, 6-3, 6-1 ಸೆಟ್‌ಗಳಿಂದ ಗೆಲುವು ದಾಖಲಿಸಿದರು. ಪಂದ್ಯಾವಳಿಯ ನೆಚ್ಚಿನ ಆಟಗಾರ್ತಿಯರಲ್ಲಿ ಒಬ್ಬರಾದ ಲಿಥುವೇನಿಯನ್ ಜಸ್ಟಿನಾ ಆರಂಭಿಕ ಸೆಟ್‌ನಲ್ಲಿ ಸಂಪೂರ್ಣ ನಿರಾಸೆ ಅನುಭವಿಸಿದ ನಂತರ ಪ್ರಭಾವಶಾಲಿಯಾಗಿ ಚೇತರಿಸಿಕೊಂಡರು.

ಎರಡನೇ ಶ್ರೇಯಾಂಕಿತ ಆಟಗಾರ್ತಿ ಜುರ್ಝಾನ್ನಾ ಪಾವ್ಲಿಕೋವ್ಸಾ ಕೂಡ ಭಾರತದ ಸೋನಾಲ್ ಪಾಟೀಲ್‌ವಿರುದ್ಧನೇರಸೆಟ್‌ಗಳಅಂತರದಲ್ಲಿಗೆಲುವು ಸಾಧಿಸಿದರೆ, ಮೂರನೇ ಶ್ರೇಯಾಂಕದ ವೈದೇಹಿ ಚೌಧರಿ ಮತ್ತು ನಾಲ್ಕನೇ ಶ್ರೇಯಾಂಕದ ಝೀಲ್ ದೇಸಾಯಿ ಅವರು ಅಂತಿಮ ಎಂಟರಲ್ಲಿಪ್ರಬಲ ಭಾರತೀಯ ಪ್ರಾತಿನಿಧ್ಯವನ್ನು ಖಚಿತಪಡಿಸಿದರು.



ಸ್ವದೇಶಿ ಆಟಗಾರ್ತಿ ಮಧುರಿಮಾ ಸಾವಂತ್ ವಿರುದ್ಧ 6-2, 6-2 ಅಂತರದ ಗೆಲುವಿನ ಸಮಯದಲ್ಲಿ ವೈದೇಹಿ ಸಂಪೂರ್ಣ ನಿಯಂತ್ರಣದಲ್ಲಿದ್ದರು. ಸ್ಪರ್ಧೆ ಯುದ್ದಕ್ಕೂ ಆಕ್ರಮಣಕಾರಿ ಬೇಸ್ ಲೈನ್ ಆಟ ಮತ್ತು ಸ್ಥಿರತೆಯನ್ನು ಪ್ರದರ್ಶಿಸಿದರು. ಏತನ್ಮಧ್ಯೆ, ಝೀಲ್, ಜೆನ್ನಿಫರ್ ಲುಯಿಖಾಮ್ ಅವರನ್ನು 6-2, 6-3 ಸೆಟ್‌ಗಳಿಂದ ಸೋಲಿಸಲು ತಮ್ಮ ಅನುಭವನ್ನು ಧಾರೆಯೆರೆದರು.

ನಾಲ್ಕನೇ ಶ್ರೇಯಾಂಕಿತ ಆಟಗಾರ್ತಿ ಝೀಲ್ ದೇಸಾಯಿ 6-2, 6-3 ಸೆಟ್‌ಗಳಿಂದ ಸಹ ಆಟಗಾರ್ತಿ ಜೆನ್ನಿಫರ್ ಲುಯಿಖಾಮ್ ಅವರನ್ನು ಸೋಲಿಸಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದರು. ಆರಂಭಿಕ ಸೆಟ್‌ನಲ್ಲಿ 0-2 ಅಂತರದಿಂದ ಹಿಂದುಳಿದ ಭಾರತ ಬಿಲ್ಲಿಜೀನ್ ಕಿಂಗ್ ಕಪ್ ತಂಡದ ಮಾಜಿ ಸದಸ್ಯೆ ತನ್ನ ಆಕ್ರಮಣಕಾರಿ ಬೇಸ್ ಲೈನ್ ಆಟ ಮತ್ತು ಉತ್ತಮ ಸ್ಥಿರತೆಯಿಂದ ಬೇಗನೆ ನಿಯಂತ್ರಣವನ್ನು ಮರಳಿ ಪಡೆದರು. ಪಂದ್ಯವನ್ನು ನಿರ್ಣಾಯಕವಾಗಿ ತಿರುಗಿಸಲು ಸತತವಾಗಿ ಆಟಗಳನ್ನು ನಿಲ್ಲಿಸಿದರು.

ರಷ್ಯಾದ ಕ್ಸೆನಿಯಾ ಲಸ್ಕುಟೋವಾ ಎರಡು ಗಂಟೆಗಳ ಕಾಲ ನಡೆದ ಕಠಿಣ ಹೋರಾಟದಲ್ಲಿಭಾರತದ ಸಂದೀಪ್ತಿ ಸಿಂಗ್ ರಾವ್ ಅವರನ್ನು ಸೋಲಿಸಿದರೆ, ಆರನೇ ಶ್ರೇಯಾಂಕದ ಎಕಟೆರಿನಾ ಯಾಶಿನಾ ಬಲ ಭುಜದ ಗಾಯದಿಂದ ನಿವೃತ್ತರಾದ ನಂತರ ಮುನ್ನಡೆ ಸಾಧಿಸಿದರು. ಎಲ್ಲಾ ಅಗ್ರ ಐದು ಶ್ರೇಯಾಂಕಗಳು ಈಗ ಫಾರ್ಮ್ ರಹಿತ ಆಟಗಾರ್ತಿಯರೊಂದಿಗೆ ಕ್ವಾರ್ಟರ್ ಫೈನಲ್‌ಗೆ ಸುರಕ್ಷಿತವಾಗಿ ಪ್ರವೇಶಿಸುವುದರೊಂದಿಗೆ ಪಂದ್ಯಾವಳಿಯು ವಾರಾಂತ್ಯದಲ್ಲಿ ರೋಮಾಂಚಕ ಮುಕ್ತಾಯದತ್ತ ಸಾಗುತ್ತಿದೆ.

ಡಬಲ್ಸ್ ವಿಭಾಗದಲ್ಲಿ ಭಾರತದ ಜೋಡಿ ಶ್ರವ್ಯಾ ಶಿವಾನಿ ಚಿಲಕಲಪುಡಿ ಮತ್ತು ಝೀಲ್ ದೇಸಾಯಿ ಜೋಡಿ ಲಕ್ಷ್ಮೀಸಿರಿ ದಂಡು ಮತ್ತು ಚೆವಿಕಾ ರೆಡ್ಡಿ ಸಾಮಾ ಅವರ ಜೋಡಿಯನ್ನು ನೇರ ಸೆಟ್ ಗಳ ಅಂತರದಲ್ಲಿಗೆದ್ದು ಸೆಮಿಫೈನಲ್ ಪ್ರವೇಶಿಸಿದರು.

ಆಕಾಂಕ್ಷಾ ದಿಲೀಪ್ ನಿಟ್ಟೂರೆ ಮತ್ತು ಮಿಚಿಕಾ ಒಜೆಕಿ ಅವರಿದ್ದ ಇಂಡೋ-ಜಪಾನ್ ಜೋಡಿ ಮೊದಲ ಸೆಟ್ ಸೋತ ನಂತರ ಅದ್ಭುತ ಹೋರಾಟ ನಡೆಸಿ ಭಾರತದ ದಿವಾ ಭಾಟಿಯಾ ಮತ್ತು ಜೆನ್ನಿಫರ್ ಲುಯಿಖಾಮ್ ಅವರನ್ನು ಉದ್ವಿಗ್ನ ಪಂದ್ಯದ ಟೈಬ್ರೇಕ್‌ನಲ್ಲಿ ಸೋಲಿಸಿದರು.

ಅಗ್ರ ಶ್ರೇಯಾಂಕಿತ ವೈದೇಹಿ ಚೌದರಿ ಮತ್ತು ಜುರ್ಝಾನ್ನಾ ಪಾವ್ಲಿಕೋವ್‌ಸ್ಕಾ ಕೂಡ ಭಾರತದ ಜೋಡಿ ಸೋಹಾ ಸಾದಿಕ್ ಮತ್ತು ಮಧುರಿಮಾ ಸಾವಂತ್ ಅವರನ್ನು ಮಣಿಸಿ ಸೆಮಿಫೈನಲ್ ಪ್ರವೇಶಿಸಿದರೆ, ಕ್ಸೆನಿಯಾ ಲಸ್ಕುಟೋವಾ ಮತ್ತು ಎಲಿನಾ ನೆಪ್ಲಿ ಭಾರತದ ಐಶ್ವರ್ಯಾ ಜಾಧವ್ ಮತ್ತು ಆಕೃತಿ ನಾರಾಯಣ್ ಸೊಂಕುಸಾರೆ ವಿರುದ್ಧ ಸುಲಭವಾಗಿ ಗೆಲ್ಲುವ ಮೂಲಕ ಸೆಮಿಫೈನಲ್ ಪ್ರವೇಶಿಸಿದರು.

ಹೈನುಗಾರರಿಗೆ 13.60 ಲಕ್ಷ ರು. ಚೆಕ್ ವಿತರಣೆ



• **ಕನ್ನಡಪ್ರಭವಾರ್ತೆ** ತುರುವೇಕೆರೆ

ತಾಲೂಕಿನ ಹಲವಾರು ಹೈನುಗಾರರಿಗೆ ಜಿಲ್ಲಾ ಹಾಲು ಒಕ್ಕೂಟದಿಂದ ಹಲವು ಯೋಜನೆಗಳ ಅಡಿಯಲ್ಲಿ ಸುಮಾರು 13.60 ಲಕ್ಷ ರುಗಳ ಚೆಕ್ ನ್ನು ಜಿಲ್ಲಾ ಹಾಲು ಒಕ್ಕೂಟದ ನಿರ್ದೇಶಕ ಕೆಎಂಎಫ್ ನ ಜಿಲ್ಲಾ ನಿರ್ದೇಶಕ ಸಿ.ವಿ.ಮಹಲಿಂಗಯ್ಯ ವಿತರಣೆ ಮಾಡಿದರು.

ಇಲ್ಲಿಯ ಎಪಿಎಂಸಿ ಆವರಣದಲ್ಲಿರುವ ನಂದಿನಿ ಕ್ಷೀರ ಭವನದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಮಾರಂಭದಲ್ಲಿ ಅವರು ಚೆಕ್ ಗಳನ್ನು ವಿತರಣೆ ಮಾಡಿದರು. ರಾಸುಗಳ ವಿಮಾ ಯೋಜನೆಯಡಿ ಮೃತಪಟ್ಟ 14 ರಾಸುಗಳ ಮಾಲೀಕರಿಗೆ ಸುಮಾರು 80 ಸಾವಿರ ರುಗಳು, ಇಬ್ಬರು ಹೈನುಗಾರರು ಮೃತಪಟ್ಟ ಹಿನ್ನೆಲೆಯಲ್ಲಿ ತಲಾ 50 ಸಾವಿರದಂತೆ ಒಂದು ಲಕ್ಷ ರುಗಳು, ಉನ್ನತ ವಿದ್ಯಾಭ್ಯಾಸಕ್ಕೆ ನೆರವಾಗಲು ಓರ್ವ ವಿದ್ಯಾರ್ಥಿಗೆ 10 ಸಾವಿರ ರುಗಳು, ಬೆಂಕಿಕೆರೆಯ ಕಟ್ಟಡ ನಿರ್ಮಾಣದ ಅನುದಾನ 4.50 ಲಕ್ಷ ರುಗಳ ಚೆಕ್ ನ್ನು ಅವರು ವಿತರಣೆ ಮಾಡಿದರು.

ಈ ವೇಳೆ ಮಾತನಾಡಿದ ಸಿ.ವಿ.ಮಹಲಿಂಗಯ್ಯ, ರೈತಾಪಿಗಳಿಗೆ ನಂದಿನಿ ಸಂಸ್ಥೆ ನೆರವಾದಷ್ಟು ಬೇರೆ ಯಾವ ಸಂಸ್ಥೆಗಳೂ ರೈತರ ನೆರವಿಗೆ ಬಂದಿಲ್ಲ. ತಮ್ಮ ಮಕ್ಕಳ ವಿದ್ಯಾಭ್ಯಾಸ, ರಾಸುಗಳ ವಿಮೆ, ಹೈನುಗಾರರಿಗೆ ವಿಮೆ ಸೇರಿದಂತೆ ವಿವಿಧ ಯೋಜನೆಗಳು ಇರುವುದರಿಂದ ರಾಜ್ಯ ಅಂತರ ರಾಜ್ಯದಲ್ಲೂ ನಂದಿನಿ ಸಂಸ್ಥೆಯ ಮೇಲೆ ರೈತರಿಗೆ ನಂಬಿಕೆ ಇದೆ ಎಂದರು. ಈ ಸಂದರ್ಭದಲ್ಲಿ ತಾಲೂಕು ಮುಖ್ಯಸ್ಥ ಮಂಜುನಾಥ್, ವಿಸ್ತರಣಾಧಿಕಾರಿಗಳಾದ ದಿವಾಕರ್, ಕಿರಣ್, ಸುನಿಲ್ ಸೇರಿದಂತೆ ಇತರರು ಇದ್ದರು.

ಅಪಘಾತ: ಸಾವಿನಲ್ಲೂ ಜೊತೆಯಾದ ಭಜರಂಗಿಗಳು

• **ಕನ್ನಡಪ್ರಭ ವಾರ್ತೆ** ಕುಣಿಗಲ್

ಬುಲೇರೋ- ಬೈಕ್ ಮಧ್ಯೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಇಬ್ಬರು ಯುವಕರು ಮೃತಪಟ್ಟ ಘಟನೆ ಇಲ್ಲಿನ ಕೊತ್ತಗೆರೆ ಬಳಿ ನಡೆದಿದೆ. ಮೃತರನ್ನು ಆಕಾಶ್ (21) ಹಾಗೂ ಮಂಜುನಾಥ್ (27) ಎಂದು ಗುರುತಿಸಲಾಗಿದೆ.

ಮೃತಪಟ್ಟ ಇಬ್ಬರೂ ಕುಣಿಗಲ್ ಪಟ್ಟಣದ ವಾಸಿಗಳಾಗಿದ್ದು ವಿಶ್ವ ಹಿಂದೂ ಪರಿಷತ್ ಹಾಗೂ ಭಜರಂಗದಳದ ಹಲವಾರು ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದ್ದರು. ಹಲವಾರು ವರ್ಷಗಳಿಂದ ಸ್ನೇಹಿತರಾಗಿದ್ದು ಪ್ರತಿದಿನ ಉತ್ತಮ ಸ್ನೇಹ ಬಾಂಧವ್ಯವನ್ನು ಹೊಂದಿದ್ದರು. ಗುರುವಾರ ಸಹ ಕಾರ್ಯ ನಿಮಿತ್ತ ಇಬ್ಬರು ಸೇರಿ ತುಮಕೂರು ಮಾರ್ಗದಲ್ಲಿ ಸಂಚರಿಸುವ ವೇಳೆ ಈ ಅಪಘಾತ ಸಂಭವಿಸಿದೆ. ಆಕಾಶ್ ಸ್ಥಳದಲ್ಲಿಯೇ ಮೃತಪಟ್ಟರೆ ಹಿಂಬದಿ ಕುಳಿತಿದ್ದ ಮಂಜುನಾಥ್ ಅವರಿಗೆ ಕಾಲು ಮುರಿದಿತ್ತು.

ಜೊತೆಗೆ ಎದೆಯ ಭಾಗದಲ್ಲಿ ತೀವ್ರ ರಕ್ತಸ್ರಾವವಾಗಿತ್ತು. ಅವರನ್ನು ಚಿಕಿತ್ಸೆಗೆ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತಾದರೂ ಚಿಕಿತ್ಸೆಫಲಿಸದೆ ಅವರು ಸಹ ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ಕುಣಿಗಲ್ ಶಾಸಕ ಡಾ. ರಂಗನಾಥ್, ಮಾಜಿ ಸಚಿವ ಡಿ ನಾಗರಾಜಯ್ಯ, ಬಿಜೆಪಿ ಮುಖಂಡ ಡಿ ಕೃಷ್ಣಕುಮಾರ್, ಸೇರಿದಂತೆ ಬಜರಂಗದಳದ ಪ್ರಮುಖರು ಭೇಟಿ ನೀಡಿ ಸಂತಾಪ ಸೂಚಿಸಿ ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿದರು.



ಈ ಸಂಬಂಧ ಕುಣಿಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದ್ದು, ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ಎಟಿಎಂ ಒಡೆದು ಕಳ್ಳತನ

ತಿಪಟೂರು: ತಾಲೂಕಿನ ಕೆ.ಬಿ ಕ್ರಾಸ್‌ನಲ್ಲಿ ಸಿನಿಮೀಯ ರೀತಿಯಲ್ಲಿ ಎಟಿಎಂ ಲಾಕರ್ ಒಡೆದು ಹಣ ಕಳವು ಮಾಡಿರುವ ಘಟನೆ ನಡೆದಿದೆ. ಕೆ.ಬಿ ಕ್ರಾಸ್‌ನ ಮಾತಾ ರೆಸಿಡೆನ್ಸಿ ಆವರಣದಲ್ಲಿ ಇರುವ ಎಸ್‌ಬಿಐ ಬ್ಯಾಂಕ್‌ಗೆ ಸೇರಿದ ಎಟಿಎಂ ಕೇಂದ್ರಕ್ಕೆ ನುಗ್ಗಿದ ಕಳ್ಳರ ಗುಂಪು, ಎಟಿಎಂ ಯಂತ್ರವನ್ನು ಹಾನಿಗೊಳಿಸಿ ಲಾಕರ್‌ಒಡೆದು ಯಂತ್ರದಲ್ಲಿದ್ದ ಸುಮಾರು ರು 5,94,400 ನಗದು ಹಣವನ್ನು ದರೋಡೆ ಮಾಡಿ ಪರಾರಿಯಾಗಿದೆ. ಪೊಲೀಸರು ಹಾಗೂ ಎಸ್‌ಬಿಐ ಬ್ಯಾಂಕ್ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ತಿಪಟೂರು ಡಿವೈಎಸ್ಪಿ ಉಮೇಶ್ ಅವರ ನೇತೃತ್ವದಲ್ಲಿ ಗ್ರಾಮಾಂತರ ವೃತ್ತ ನಿರೀಕ್ಷಕ ಚಂದ್ರಶೇಖರ್, ಸಬ್ ಇನ್‌ಸ್ಪೆಕ್ಟರ್ ನಾಗರಾಜು ಹಾಗೂ ತಜ್ಞರ ತಂಡ ಸ್ಥಳ ಪರಿಶೀಲನೆ ನಡೆಸಿ ಸಾಕ್ಷ್ಯಗಳನ್ನು ಸಂಗ್ರಹಿಸಿದೆ.ಎಸ್‌ಬಿಐ ಅಧಿಕಾರಿಗಳ ದೂರಿನ ಮೇರೆಗೆ ಕೆ.ಬಿ ಕ್ರಾಸ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಾಹಿತ್ಯ-ಶಿಕ್ಷಣ-ಸಮಾಜ ಸೇವೆಯ ಸಮನ್ವಯ ಸಾಧಕ

ಪುತ್ತೂರು ಉಮೇಶ್ ನಾಯಕ್

ಪುತ್ತೂರು ಉಮೇಶ್ ನಾಯಕ್ ಅವರು ಸಾಹಿತ್ಯ, ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖ ವ್ಯಕ್ತಿತ್ವ. ಚಿಂತನೆ, ಕ್ರಿಯಾಶೀಲತೆ ಮತ್ತು ಮಾನವೀಯ ಸೇವಾಭಾವದ ಮೂಲಕ ಪುತ್ತೂರು ತಾಲೂಕು ಮಾತ್ರವಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿರುವ ಅವರು, ಸಮಾಜದ ವಿವಿಧ ಹಂತಗಳ ಮೇಲೆ ಸ್ಪಷ್ಟವಾದ ಸಕಾರಾತ್ಮಕ ಪ್ರಭಾವ ಬೀರಿರುವ ಸೇವಾ ಸಾಧಕರು.



ಪ್ರಸ್ತುತ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿರುವ ಅವರು, ಕಳೆದ ನಾಲ್ಕು ವರ್ಷಗಳಿಂದ ತಾಲೂಕಿನ 32 ಗ್ರಾಮಗಳಲ್ಲಿ ಪ್ರತಿಮಾಸವೂ ಮಕ್ಕಳ ಸಾಹಿತ್ಯ ಸಮ್ಮೇಳನದ ಸ್ವರೂಪದ ಗ್ರಾಮ ಸಾಹಿತ್ಯ ಸಂಭ್ರಮ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದಾರೆ. ಗ್ರಾಮ ಸಾಹಿತ್ಯ ಸಂಭ್ರಮದಲ್ಲಿ ವಿದ್ಯಾರ್ಥಿ ಕವಿ ಗೋಷ್ಠಿ ಜೊತೆಗೆ ವಿನೂತನ ಪ್ರಯೋಗಗಳಾದ ಬಾಲಕಥಾಗೋಷ್ಠಿ, ಪ್ರವಾಸ ಕಥನ ಲೇಖನ, ನನ್ನ ಆಪ್ತಮಿತ್ರ ಲೇಖನ, ನನ್ನ ನೆಚ್ಚಿನ ಶಿಕ್ಷಕ ಲೇಖನ ಗೋಷ್ಠಿಗಳನ್ನು ಅಳವಡಿಸಿಕೊಂಡು ಯುವ ಜನತೆಯನ್ನು ಸಾಹಿತ್ಯ ಕ್ಷೇತ್ರದತ್ತ ಬರಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. 250ಕ್ಕೂ ಹೆಚ್ಚು ವಿವಿಧ ಕ್ಷೇತ್ರಗಳ ಸಾಧಕರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ಗೌರವಿಸಿದ್ದಾರೆ. 100ಕ್ಕೂ ಅಧಿಕ ಹೊಸ ಕೃತಿಗಳ ಪ್ರಕಟಣೆಗೆ ಮಾರ್ಗದರ್ಶನ ನೀಡಿ ಉದಯೋನ್ಮುಖ ಸಾಹಿತಿಗಳಿಗೆ ಬೆಂಬಲ ನೀಡಿದ್ದಾರೆ.

ಪುತ್ತೂರು ತಾಲೂಕಿನಲ್ಲಿ ಸುಮಾರು 20 ವರ್ಷಗಳಿಂದ ನಿಂತುಹೋದ ಕರ್ನಾಟಕ ರಾಜ್ಯೋತ್ಸವದ ಕನ್ನಡ ಭುವನೇಶ್ವರಿಯ ಭವ್ಯ ಮೆರವಣಿಗೆಯನ್ನು ಪುತ್ತೂರಿನ ಶಾಸಕರಾದ ಅಶೋಕ್ ರೈ ಯವರ ಮಾರ್ಗದರ್ಶನದಲ್ಲಿ ಸುಮಾರು 50ಕ್ಕೂ ಹೆಚ್ಚು ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪುನರಾರಂಭಿಸಿ, ರಾಜ್ಯೋತ್ಸವದ ಅಂಗವಾಗಿ ನಡೆಯುವ ಸನ್ಮಾನವನ್ನು ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಸ್ವರೂಪಕ್ಕೆ ತಂದ ಪ್ರಮುಖ ವ್ಯಕ್ತಿ. ಜಿಲ್ಲೆಯಲ್ಲಿ ತಾಲೂಕು ಮಟ್ಟದಲ್ಲಿ ರಾಜ್ಯೋತ್ಸವ ಪ್ರಶಸ್ತಿ ವ್ಯವಸ್ಥಿತವಾಗಿ ನಡೆಯುತ್ತಿರುವುದು ಪುತ್ತೂರಿನಲ್ಲಿ ಮಾತ್ರ ಎನ್ನುವುದು ಗಮನಾರ್ಹ.



ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಸುವರ್ಣ ಕನ್ನಡಿಗ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕನ್ನಡದಲ್ಲೂ ಐಎಎಸ್ ಬರೆಯಿರಿ' ಅಭಿಯಾನ

ಶಿಕ್ಷಣ ಕ್ಷೇತ್ರದಲ್ಲಿ ಇವರ ಕೊಡುಗೆ ವಿಶೇಷವಾಗಿದೆ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಭವಿಷ್ಯವನ್ನು ಗಮನದಲ್ಲಿರಿಸಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಅಧಿಕಾರಿಗಳಾಗಬೇಕೆಂಬ ಮಹಾದಾಸೆಯಿಂದ ಕನ್ನಡದಲ್ಲೂ ಐಎಎಸ್ ಪರೀಕ್ಷೆ ಬರೆಯಿರಿ ಎಂಬ ಅಭಿಯಾನವನ್ನು ಆರಂಭಿಸಿ, 200ಕ್ಕೂ ಅಧಿಕ ಐಎಎಸ್- ಐಪಿಎಸ್ ಹಾಗೂ ತತ್ಸಮಾನ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ಕಾರ್ಯಾಗಾರಗಳನ್ನು ಕನ್ನಡದಲ್ಲೇ ನಡೆಸಿ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಅರಿವನ್ನುಂಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮಮಟ್ಟದಲ್ಲಿ ಸಾಹಿತ್ಯ ಸಂಭ್ರಮ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಕ್ರಮಗಳನ್ನು ಸಂಯೋಜಿತವಾಗಿ ನಡೆಸಿರುವುದು ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದಲ್ಲೇ ವಿನೂತನ ಪ್ರಯತ್ನವಾಗಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಅವರು ಸಾಧಕ ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ಇತಿಹಾಸ ಪ್ರಸಿದ್ಧ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಸಂಕ್ಷಿಪ್ತ ಸ್ಥಳಪುರಾಣವಾದ ಸ್ವಯಂಭೂ ಮಹಾಲಿಂಗೇಶ್ವರ ಕೃತಿಯನ್ನು ರಚಿಸಿದ್ದು, ಈ ಕೃತಿ ಧಾರ್ಮಿಕ ದತ್ತಿ ಇಲಾಖೆಯಿಂದ ಪ್ರಕಟವಾಗಿದೆ. ಇದಲ್ಲದೆ ಇನ್ನೂ ಮೂರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೀಡಿದ್ದಾರೆ.

ನಿರ್ಗತಿಕರ ಪುನರ್ವಸತಿ ಸೇವೆ: ಪುತ್ತೂರು ಉಮೇಶ್ ನಾಯಕ್ ಅವರ ಸೇವಾ ಬದುಕಿನ ಅತ್ಯಂತ ಸ್ಪರ್ಶಕ ಅಧ್ಯಾಯವೆಂದರೆ ನಿರ್ಗತಿಕರು, ಭಿಕ್ಷುಕರು ಮತ್ತು ಅನಾಥರ ಪುನರ್ವಸತಿ ಕಾರ್ಯ. ಕಳೆದ ಹತ್ತು ವರ್ಷಗಳಲ್ಲಿ 100ಕ್ಕೂ ಅಧಿಕ ನಿರ್ಗತಿಕರನ್ನು ಪುನರ್ವಸತಿ ಕೇಂದ್ರಗಳಿಗೆ ಸೇರಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಸಂಕಲ್ಪದೊಂದಿಗೆ ಅವರಿಗೆ ಹೊಸ ಬದುಕಿನ ಆಶಾಕಿರಣ ನೀಡಿದ್ದಾರೆ. ವಿಶೇಷವಾಗಿ ಎಚ್‌ಐವಿ ಪೀಡಿತ ಓರ್ವ ಮಹಿಳೆ ಹಾಗೂ ಇಬ್ಬರು ಮಕ್ಕಳನ್ನು ರಕ್ಷಿಸಿ, ಅವರಿಗೆ ವೈದ್ಯಕೀಯ ನೆರವು, ಆಶ್ರಯ ಮತ್ತು ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಿರುವುದು ಇವರ ಮಾನವೀಯತೆಯ ಮಾದರಿಯಾಗಿದೆ.

ಗೌರವಗಳು :
ಇವರ ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಮಾಜಮುಖಿ ಸೇವೆಗಳನ್ನು ಗುರುತಿಸಿ 2020ರಲ್ಲಿ ರೋಟರಿ ಅನ್‌ಸಂಗ್ ಹೀರೋ ಪ್ರಶಸ್ತಿ ಹಾಗೂ 2025ರಲ್ಲಿ ಪುತ್ತೂರು ತಾಲೂಕು ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಇತ್ತೀಚೆಗೆ ಕನ್ನಡಪ್ರಭ ಏಷಿಯಾನೆಟ್ ಸುವರ್ಣನ್ಯೂಸ್ನ ಸುವರ್ಣ ಕನ್ನಡಿಗ' ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಮಾಜಸೇವೆಗೆ ದೊರೆತ ಮುಕುಟವಾಗಿದೆ.

ತಮ್ಮ ಒಡಹುಟ್ಟಿದ ಡೌನ್ ಸಿಂಡ್ರೋಮ್ ಸಹೋದರ ಸುರೇಶ್ ನಾಯಕ್ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಹಾಗೂ ಅವರಿಗೆ ಜಾದೂ ಪ್ರರ್ಶನ ಕಲಿಸಿ ಅವರ ಪ್ರತಿಭೆಯನ್ನು ಪ್ರಪಂಚಕ್ಕೆ ತೋರಿಸಿಕೊಟ್ಟಿದ್ದಾರೆ. ಅವರು ದೇಶದಾದ್ಯಂತ ಇದುವರೆಗೆ 500 ಕ್ಕೂ ಅಧಿಕ ಉಚಿತ ಪ್ರದರ್ಶನಗಳ ಮೂಲಕ ಬುದ್ಧಿಮಾಂದ್ಯತಾ ಜನಜಾಗೃತಿಯನ್ನು ಮೂಡಿಸಿದ್ದಾರೆ. ಉಡುಪಿಯ ಡೌನ್ ಸಿಂಡ್ರೋಮ್ ಈಜುಗಾರ್ತಿ ಅರ್ಚನಾ ಜೈ ವಿಠ್ಠಲ್, ಮೈಸೂರಿನ ದಿವ್ಯಾಂಗ ಕೀ ಬೋರ್ಡ್ ಕಲಾವಿದ ಶ್ರೀ ಗಣೇಶ್ ಭಟ್ ಹಾಗೂ ಡೌನ್ ಸಿಂಡ್ರೋಮ್ ಜಾದೂಗಾರ ಸುರೇಶ ನಾಯಕ್ ಇವರಿಗೆ ವಿಶ್ವ ಅಂಗವಿಕಲ ದಿನಾಚರಣೆಯ ರಾಷ್ಟ್ರಪತಿಗಳ ರಾಷ್ಟ್ರ ಪ್ರಶಸ್ತಿ ದೊರಕುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ.

ಪ್ರಸ್ತುತ ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಶ್ರೀರಾಮ್ ಶೇರ್ಸ್ ಅಂಡ್ ಫೈನಾನ್ಸಿಯಲ್ ಕನ್ಸಲ್ಟೆಂಟ್ ಎಂಬ ಸಂಸ್ಥೆಯ ಆಡಳಿತ ನಿರ್ದೇಶಕರಾಗಿದ್ದು, ಈ ಸಂಸ್ಥೆಯ ಮೂಲಕ ಶೇರು ಉದ್ಯಮವನ್ನು ನಡೆಸುತ್ತಿದ್ದಾರೆ. ಪತ್ನಿ ರೂಪಶ್ರೀ ನಾಯಕ್, ಪುತ್ರ ಸಾತ್ವಿಕ್ ನಾಯಕ್ ಹಾಗೂ ಸಹೋದರ ಸುರೇಶ್ ನಾಯಕ್ ಹಾಗೂ ಪೋಷಕರೊಂದಿಗೆ ಪುತ್ತೂರಿನಲ್ಲಿ ವಾಸವಾಗಿದ್ದಾರೆ (ದೂರವಾಣಿ: 9844401295).

ಗರಿಷ್ಠ 34°c | ಕನಿಷ್ಠ 23°c

ಸುದ್ದಿ ಸಿಂಚನ

ಕಲ್ಪತರು ಟ್ರಸ್ ಅಧ್ಯಕ್ಷರಾಗಿ ಡಾ.ಚೌದ್ರಿ ನಾಗೇಶ್ ಆಯ್ಕೆ

ತುರುವೇಕೆರೆ: ತಾಲೂಕಿನಲ್ಲಿ ಕಳೆದ ಮೂವತ್ತು ವರ್ಷಗಳಿಗೂ ಹೆಚ್ಚು ಕಾಲದಿಂದ ಸಮಾಜ ಸೇವೆಯಲ್ಲಿ ತೊಡಗಿರುವ ಲಯನ್ಸ್ ಕ್ಲಬ್ ತನ್ನ ಸಮಾಜ ಸೇವೆಗಳನ್ನು ವಿಸ್ತರಿಸುವ ಸಲುವಾಗಿ ಪ್ರಾರಂಭಿಸಿರುವ ಕಲ್ಪತರು ಲಯನ್ಸ್ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷರಾಗಿ ಡಾ.ಚೌದ್ರಿ ನಾಗೇಶ್ ಅವರನ್ನು ನೇಮಕ ಮಾಡಿ ಅವರಿಗೆ ಅಧಿಕಾರ ಹಸ್ತಾಂತರಿಸಲಾಯಿತು. ಪಟ್ಟಣದಲ್ಲಿ ನಡೆದ ಪದಗ್ರಹಣ ಕಾರ್ಯಕ್ರಮದಲ್ಲಿ ಈ ಹಿಂದಿನ ಅಧ್ಯಕ್ಷ ಪಿ.ಎಚ್.ಧನಪಾಲ್ ನೂತನ ಅಧ್ಯಕ್ಷರಾದ ಡಾ.ಚೌದ್ರಿ ನಾಗೇಶ್ ರವರಿಗೆ ಕೆಲ ದಾಖಲೆಗಳನ್ನು ನೀಡುವ ಮೂಲಕ ಅಧಿಕಾರ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಪಿ.ಎಚ್.ಧನಪಾಲ್ ತಾಲೂಕಿನಲ್ಲಿ ಲಯನ್ಸ್ ಕ್ಲಬ್ ಸಾವಿರಾರು ಸೇವಾ ಕಾರ್ಯಗಳನ್ನು ಮಾಡಿದೆ. ಆಡು ಮುಟ್ಟದ ಸೊಪ್ಪಿಲ್ಲ ಎಂಬಂತೆ ಲಯನ್ಸ್ ಎಲ್ಲಾ ವಿಧವಾದ ಕ್ಷೇತ್ರದಲ್ಲಿ ತನ್ನದೇ ಆದ ಸೇವೆ ಮಾಡಿದೆ. ಈ ಸಂಸ್ಥೆ ರಾಜ್ಯದ ಎಲ್ಲಾ ಸಂಸ್ಥೆಗಳಿಗೂ ಮಾದರಿಯಾಗಿದೆ. ಮುಂಬರುವ ದಿನಗಳಲ್ಲೂ ನೂತನ ಅಧ್ಯಕ್ಷರು ಇನ್ನೂ ಹೆಚ್ಚಿನ ಸೇವೆ ಸಲ್ಲಿಸಲಿ ಎಂದು ಹಾರೈಸಿದರು. ಶಾಸಕ ಎಂ.ಟಿ.ಕೃಷ್ಣಪ್ಪ ಮಾತನಾಡಿ, ಲಯನ್ಸ್ ಕ್ಲಬ್ ತಾಲೂಕಿನಲ್ಲಿ ಉತ್ತಮವಾಗಿ ಸೇವೆ ಸಲ್ಲಿಸಿದೆ. ಕಣ್ಣಿನ ಪರೀಕ್ಷೆ, ಶಸ್ತ್ರ ಚಿಕಿತ್ಸೆ ಸೇರಿದಂತೆ ವಿವಿಧ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸಿ ಜನಸಾಮಾನ್ಯರಿಗೆ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಿದೆ. ಲಯನ್ಸ್ ಕ್ಲಬ್ ವತಿಯಿಂದ ನಿರ್ಮಿಸಿರುವ ಲಯನ್ಸ್ ಭವನವನ್ನು ಸೇವಾ ಕೇಂದ್ರವನ್ನಾಗಿ ಮಾರ್ಪಡಿಸಲು ತಾವು ತಮ್ಮ ಕೈಲಾದ ಸಹಕಾರ ನೀಡುವುದಾಗಿ ಹೇಳಿದರು. ಈ ವೇಳೆ ನೂತನ ಸಮಿತಿಯ ಉಪಾಧ್ಯಕ್ಷರಾಗಿ ನಂಜೇಗೌಡ, ಕಾರ್ಯದರ್ಶಿಯಾಗಿ ಎಚ್.ಆರ್.ರಂಗನಾಥ್, ಖಜಾಂಚಿಯಾಗಿ ಕೆ.ಶಿವಾನಂದ್, ನಿರ್ದೇಶಕರಾಗಿ ಟಿ.ವಿ. ಮಹೇಶ್, ಗಂಗಾಧರ ದೇವರ ಮನೆ, ಪ್ರದೀಪ್ ಗುಪ್ತಾ, ಕೆ.ಲೋಕೇಶ್, ವಿಹಿರಾಕುಮಾರ್, ಟಿ.ಸಿ.ಸುನಿಲ್ ಬಾಬು, ಜಿ.ಸಿ.ಶ್ರೀನಿವಾಸ್ ರವರನ್ನು ನೇಮಕ ಮಾಡಲಾಯಿತು. ಈ ವೇಳೆ ಟ್ರಸ್ಟ್‌ನ ಗೌರವಾಧ್ಯಕ್ಷರಾದ ಡಾ.ನಾಗರಾಜ್, ಲಯನ್ಸ್ ಕ್ಲಬ್‌ನ ಅಧ್ಯಕ್ಷ ಎಚ್.ಎನ್.ಪರಮೇಶ್ವರಯ್ಯ, ಟ್ರಸ್ಟ್‌ನ ಟಿ.ಎ.ವಿ.ಗುಪ್ತಾ, ಸ್ವಾಗತ ಸಮಿತಿ ಅಧ್ಯಕ್ಷ ಕೆ.ಲೋಕೇಶ್, ಟಿ.ವಿ.ಮಹೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕವಿತಾ ನಿಧನ



ತಿಪಟೂರು: ತಾಲೂಕು ವೀರಶೈವ ಲಿಂಗಾಯತ ಸಂಘಟನಾ ವೇದಿಕೆಯ ನಿರ್ದೇಶಕರಾದ ಲಿಂಗದಹಳ್ಳಿ ಮಂಜಣ್ಣನವರ ಪತ್ನಿ ಅಂಗನವಾಡಿ ಕಾರ್ಯಕರ್ತೆ ಕವಿತಾ(47) ಗುರುವಾರ ಕಿಡ್ನಿ ವೈಫಲ್ಯದಿಂದ ನಿಧನರಾದರು. ಇವರ ಅಂತ್ಯಕ್ರಿಯೆಯನ್ನು ಮಂಜಣ್ಣನವರ ತೋಟದಲ್ಲಿ ನೆರವೇರಿಸಲಾಗುವುದು ಎಂದು ಕುಟುಂಬಗಳ ಮೂಲಗಳು ತಿಳಿಸಿವೆ. ಮೃತರ ಆತ್ಮಕ್ಕೆ ಶಾಂತಿ ಸಿಗಲೆಂದು ತಾಲೂಕು ವೀರಶೈವ ಲಿಂಗಾಯತ ಸಂಘಟನಾ ವೇದಿಕೆಯ ಕೋರಿದೆ.

ತಿಪಟೂರು ಕೊಬ್ಬರಿ ಧಾರಣೆ




ದಿನಾಂಕ : 07-05-2026ರಿಂದ ಧಾರಣೆ

- ಕನಿಷ್ಠ.................. 30,105
- ಗರಿಷ್ಠ.................. 34000
- ಮಾದರಿ.................. 33000
- ಒಟ್ಟು ಅವಕ (ಕ್ವಿಂಟಲ್).................. 853
- ಚೀಲ.................. 1984



ಕಲ್ಪತರು ಲಯನ್ಸ್ ಚಾರಿಟಬಲ್ ಟ್ರಸ್ಟ್‌ನ ಪದಗ್ರಹಣ ಕಾರ್ಯಕ್ರಮದಲ್ಲಿ ಹಿಂದಿನ ಅಧ್ಯಕ್ಷ ಪಿ.ಎಚ್.ಧನಪಾಲ್ ನೂತನ ಅಧ್ಯಕ್ಷರಾದ ಡಾ.ಚೌದ್ರಿ ನಾಗೇಶ್ ರವರಿಗೆ ಕೆಲ ದಾಖಲೆಗಳನ್ನು ನೀಡುವ ಮೂಲಕ ಅಧಿಕಾರ ಹಸ್ತಾಂತರಿಸಿದರು.



ಗುಬ್ಬಿ ಪಟ್ಟಣದ ತಾಲೂಕು ಕಚೇರಿ ಆವರಣದಲ್ಲಿ ಕೋತಿಯೊಂದು ಮಧ್ಯಾಹ್ನ ನೀರಿಗಾಗಿ ಪರಿತಪಿಸಿ ಕಸದಲ್ಲಿ ಬಿಸಾಗಿದ್ದ ಬಾಟಲ್ ತೆಗೆದು ಕುಡಿಯುತ್ತಿರುವ ಚಿತ್ರವೊಂದು ಕನ್ನಡಪ್ರಭಕ್ಕೆ ಸಿಕ್ಕಿದೆ. ಈ ಬಗ್ಗೆ ನೆಟ್ಟಿಗರು ಸಹ ಸಾಕಷ್ಟು ಕಾಮೆಂಟ್ ಮಾಡಿದ್ದು ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗಿದೆ.



ಅಗ್ನಿಶಾಮಕ ದಳದ ಕಾರ್ಯ ಸ್ತುತ್ಯಾರ್ಹ

ತುರುವೇಕೆರೆ: ಅಗ್ನಿಶಾಮಕ ದಳದ ಸಿಬ್ಬಂದಿ ತಮ್ಮ ಜೀವದ ಹಂಗನ್ನೂ ತೊರೆದು ಸೇವೆ ಮಾಡುವರು. ಇವರು ಸಹ ಯೋಧರಿಗೆ ಸಮಾನ ಎಂದು ತಾಲೂಕು ಜಯ ಕರ್ನಾಟಕ ಕುವೆಂಪು ಸಮಗ್ರ ಗ್ರಾಮೀಣ ಸಂಸ್ಥೆಯ ಅಧ್ಯಕ್ಷ ವೆಂಕಟೇಶ್ ಹೇಳಿದರು. ರಾಷ್ಟ್ರೀಯ ಅಗ್ನಿಶಾಮಕ ಸೇವಾ ದಿನಾಚರಣೆಯ ಅಂಗವಾಗಿ ಪಟ್ಟಣದಲ್ಲಿರುವ ಅಗ್ನಿಶಾಮಕ ಸಿಬ್ಬಂದಿ ಸನ್ಮಾನಿಸಿ ಮಾತನಾಡಿದ ಅವರು, ಅಗ್ನಿಶಾಮಕ ದಳದ ಸಿಬ್ಬಂದಿ ಕಾರ್ಯ ಸ್ತುತ್ಯಾರ್ಹ. ಸಂಕಷ್ಟದ ಸ್ಥಿತಿಯಲ್ಲಿ ಅವರು ತಮ್ಮ ಜೀವದ ಹಂಗನ್ನೂ ತೊರೆದು ಬೇರೆಯವರ ಆಸ್ತಿ ಪಾಸ್ತಿ, ಜೀವವನ್ನು ಉಳಿಸಲು ಹೋರಾಡುತ್ತಾರೆ ಎಂದರು. ಈ ಸಂದರ್ಭದಲ್ಲಿ ಕೊಡಗೀಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮಹೇಂದ್ರ, ಸೋಮೇನಹಳ್ಳಿ ಜಗದೀಶ್, ಶಿವಣ್ಣ, ಗಿರೀಶ್ ಇದ್ದರು.

ತಿಪಟೂರು ತಾಲೂಕಿನಾದ್ಯಂತ ಅಕ್ರಮ ಮದ್ಯ ಮಾರಾಟ

ಕಂಡೂ ಕಾಣದಂತಿರುವ ಅಬಕಾರಿ, ಪೊಲೀಸ್ ಇಲಾಖೆ | ಸ್ತ್ರೀ ಶಕ್ತಿ ಸಂಘಗಳಿಂದ ತೀವ್ರ ಆಕ್ಷೇಪ | ಹೋರಾಟದ ಎಚ್ಚರಿಕೆ

• **ಕನ್ನಡಪ್ರಭ ವಾರ್ತೆ** ತಿಪಟೂರು

ತಾಲೂಕಿನಾದ್ಯಂತ ಮೂಲೆ ಮೂಲೆಗಳ ಹಳ್ಳಿಗಳೆಲ್ಲೆಲ್ಲಾ ಅಕ್ರಮ ಮದ್ಯ ಮಾರಾಟ ಯಾವುದೇ ಭಯವಿಲ್ಲದೆ ರಾಜಾರೋಷವಾಗಿ ನಡೆಯುತ್ತಿದ್ದರೂ ಇದನ್ನು ಕಂಡೂ ಕಾಣದಂತಿರುವ ಅಬಕಾರಿ ಹಾಗೂ ಪೊಲೀಸ್ ಅಧಿಕಾರಿಗಳ ವಿರುದ್ಧ ತಾಲೂಕಿನ ಬಹುತೇಕ ಮಹಿಳಾ ಸಂಘಟನೆಗಳು, ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರು, ಮುಖಂಡರು ಪೊಲೀಸ್ ಹಾಗೂ ಅಬಕಾರಿ ಇಲಾಖೆ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.



ಒಂದೊಂದು ಗ್ರಾಮದಲ್ಲಿ ಎರಡು-ಮೂರು ಅಂಗಡಿಗಳಲ್ಲಿ ಅಕ್ರಮವಾಗಿ ದುಬಾರಿ ಬೆಲೆಗೆ ಮದ್ಯ ಮಾರುತ್ತಿರುವುದರಿಂದ ಬಡ ಹಾಗೂ ಮಧ್ಯಮ ಕುಟುಂಬಗಳು ಬೀದಿಪಾಲಾಗುತ್ತಿರುವ ಬಗ್ಗೆ ಅಬಕಾರಿ, ಪೊಲೀಸ್ ಇಲಾಖೆಗಳಿಗೆ ತಿಳಿಸಿದರೂ ಈ ಅಕ್ರಮ ಮದ್ಯ ಮಾರಾಟ ಮಾಡುವವರ ವಿರುದ್ಧ ಯಾವುದೇ ಕ್ರಮಕ್ಕೆಗೊಳ್ಳದಿರುವುದನ್ನು ನೋಡಿದರೆ ಅಧಿಕಾರಿಗಳೇ ಅಕ್ರಮ ಮಾರಾಟಗಾರರಿಗೆ ಶಾಮೀಲಾಗಿ ಕೂಲಿ, ಬಡ, ಮಧ್ಯಮ ಮತ್ತು ಮರ್ಯಾದಸ್ತ ಕುಟುಂಬಗಳೂ ಬೀದಿ ಪಾಲಾಗುವಂತಾಗಿದೆ ಎಂಬುದು ಮಹಿಳೆಯರ ಆರೋಪವಾಗಿದೆ.

ಬಡ ಕುಟುಂಬದ ಗಂಡಸರು ಕುಡಿತದ ದಾಸರಾಗುತ್ತಿದ್ದು ಕೂಲಿ ಮಾಡಿ ಅದರಿಂದ ಬಂದ ಹಣವನ್ನು ಕುಡಿತಕ್ಕೇ ಖರ್ಚು ಮಾಡುತ್ತಿದ್ದಾರೆ. ಇದರಿಂದ ಕುಟುಂಬ ನಿರ್ವಹಣೆ, ಮಕ್ಕಳ ವಿದ್ಯಾಭ್ಯಾಸಕ್ಕೆ ಕಷ್ಟಕರವಾಗುತ್ತಿದೆ ಎಂದು ಮಹಿಳೆಯರು ತಮ್ಮ ನೋವು ಹೇಳಿಕೊಳ್ಳುತ್ತಿದ್ದಾರೆ.

ಹಳ್ಳಿಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡಲು ಬಾರ್‌ಗಳವರು ಮರ್‌ನಾಲ್ಕು ಹುಡುಗರನ್ನು ಇಟ್ಟುಕೊಂಡು ಕಳ್ಳಮಾರ್ಗದಲ್ಲಿ ಅಕ್ರಮವಾಗಿ ಮದ್ಯ ಸರಬರಾಜು ಮಾಡುತ್ತಿದ್ದಾರೆ. ಇದರಿಂದ ಅನೇಕ ಸಂಸಾರಗಳು ಆರ್ಥಿಕ ಸಂಕಷ್ಟಗಳಿಗೆ ಗುರಿಯಾಗುತ್ತಿರುವುದಲ್ಲದೆ ಸಾಕಷ್ಟು ಕುಟುಂಬಗಳು ದೌರ್ಜನ್ಯಕ್ಕೊಳಗಾಗುತ್ತಿರುವುದು ಕಳವಳದ ಸಂಗತಿಯಾಗಿದೆ.

ಯುವಕರು, ವಿದ್ಯಾರ್ಥಿಗಳು ಎಣ್ಣೆ ದಾಸರು: ಹಳ್ಳಿಗಳಲ್ಲಿ ಯಾರೇ ಕೆಲಸಕ್ಕೆ ಕರೆದರೂ ಸಂಜೆಗೆ ಎಣ್ಣೆ ಹಾಕಿಸುತ್ತೀರಾ ಎಂದು ಕೇಳುವಂತಾಗಿದೆ. ಸಣ್ಣಪುಟ್ಟ ಸಮಾರಂಭಗಳಿದ್ದರೂ ಹಳ್ಳಿಗಳಲ್ಲಿ ಯುವಕರಿಗೆ ಎಣ್ಣೆ ಪಾರ್ಟಿ ಮಾಡಿಸಲೇ ಬೇಕು ಎಂಬ ಮಟ್ಟಿಗೆ ಎಣ್ಣೆ ಮಾರಾಟವಾಗುತ್ತಿದ್ದು ಬದುಕಿ ಬಾಳಬೇಕಾದ ಯುವಜನತೆ, ವಿದ್ಯಾರ್ಥಿಗಳೂ ದಿಕ್ಕುತಪ್ಪುವಂತಾಗಿದೆ. ದೊಡ್ಡವರಾದಿಯಾಗಿ 16-17 ವರ್ಷದ ಮಕ್ಕಳು ಕುಡಿಯಲು ಪ್ರಾರಂಭಿಸಿದ್ದು, ತಮ್ಮ ಆರೋಗ್ಯವನ್ನು ಹಾಳುಮಾಡಿಕೊಳ್ಳುತ್ತಿದ್ದಾರೆ.

ದಿನದಿಂದ ದಿನಕ್ಕೆ ಕುಡುಕರ ಹಾವಳಿ ಹೆಚ್ಚಾಗುತ್ತಿದೆ. ಹಳ್ಳಿಗಳಲ್ಲಿ ಎಣ್ಣೆ ಮಾರುವವರಿಗೆ ಸಾರ್ವಜನಿಕರು, ಮಹಿಳೆಯರು ಎಣ್ಣೆ ಮಾರಕೂಡದು. ಮಾರಿರೆ ದೂರು ನೀಡುತ್ತೇವೆಂದು ಹೆದರಿಸಿದರೂ ಮಾರಾಟಗಾರರು ಯಾರಿಗೆ ದೂರು ನೀಡುತ್ತೀರೋ ನೀಡಿ. ನಾವು ಎಲ್ಲ ಅಧಿಕಾರಿಗಳನ್ನು ಸರಿಮಾಡಿಕೊಂಡೇ ವ್ಯಾಪಾರಕ್ಕೆ ಕೂತಿರೋದು ಎಂದು ದಬಾಯಿಸುವ ಬಗ್ಗೆಯೂ ಮಹಿಳಾ ಸಂಘದವರು ಹೇಳುತ್ತಿದ್ದಾರೆ. ಆದ್ದರಿಂದ ಹಳ್ಳಿಗಳಲ್ಲಿ ನಡೆಯುತ್ತಿರುವ ಅಕ್ರಮ ಮದ್ಯ ಮಾರಾಟ ದಂಧೆಯನ್ನು ನಿಲ್ಲಿಸುವ ಮೂಲಕ ಹಳ್ಳಿಗಳಲ್ಲಿನ ನೆಮ್ಮದಿ, ಯುವಜನತೆಯನ್ನು ರಕ್ಷಿಸಬೇಕೆಂದು ಮಹಿಳಾ ಸಂಘಟನೆಯ ಸಿದ್ದಗಂಗಮ್ಮ ಒತ್ತಾಯಿಸಿದ್ದಾರೆ.

> ಸರ್ಕಾರ ಹಳ್ಳಿಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುವವರಿಗೆ ಒಂದು ರೀತಿ ರಕ್ಷಣೆ ಒದಗಿಸಿದಂತಿದೆ. ಹಳ್ಳಿಗಳಲ್ಲೇ ಮದ್ಯ ಯಾವಾಗಬೇಕಾದರೂ ಸಿಗುತ್ತಿರುವುದರಿಂದ ಹಲವಾರು ಕುಟುಂಬಗಳು ಬೀದಿ ಪಾಲಾಗುತ್ತಿವೆ. ಕುಡಿದು ಬರುವ ಪುರುಷರು ಮಹಿಳೆಯರ ಮೇಲೆ ದೌರ್ಜನ್ಯ ಎಸಗುತ್ತಿದ್ದಾರೆ. ಕುಡಿತದ ಚಟ ಹೆಚ್ಚಾಗಿ ಯುವಕರ ಆರೋಗ್ಯ ಹಾಳಾಗುತ್ತಿದೆ.
>
> • **ರಾಧಮ್ಮ** ಮಹಿಳಾ ಸಂಘ, ಹಳೇಪಾಳ್ಯ

> ನಗರ ಅಥವಾ ಹಳ್ಳಿಗಳಲ್ಲಿ ಪರವಾನಿಗೆ ಇಲ್ಲದೆ ಮದ್ಯ ಮಾರಾಟ ಮಾಡುವುದು ಅಪರಾಧವಾಗಿದ್ದು, ತಾಲೂಕಿನ ಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಾಟ ನಡೆಯುತ್ತಿರುವ ವಿಷಯ ನಮ್ಮ ಇಲಾಖೆಯ ಗಮನಕ್ಕೂ ಬಂದಿದೆ. ದೂರುಗಳು ಬಂದ ಕಡೆ ಭೇಟಿ ನೀಡಿ ಕೆಲ ಅಕ್ರಮ ಮದ್ಯ ಮಾರಾಟ ಮಾಡುವವರ ವಿರುದ್ಧ ಕೇಸು ದಾಖಲಿಸಲಾಗಿದೆ. ಅಂತಹವರ ವಿರುದ್ಧ ಕ್ರಮಕ್ಕೈಗೊಳ್ಳುತ್ತೇವೆ.
>
> • **ವಿಜಯಕುಮಾರ್** ಅಬಕಾರಿ ಉಪ ಅಧೀಕ್ಷಕರು, ತಿಪಟೂರು

ಹದ್ದಿನ ಗಿಡದ ಹಳ್ಳ ಮುಕ್ತಗೊಳಿಸಲು ಗ್ರಾಮಸ್ಥರ ಆಗ್ರಹ

ಕಂದಾಯ ಇಲಾಖೆ ಅಧಿಕಾರಿಗಳ ಮಾತಿಗೂ ಕ್ಯಾರೆ ಎನ್ನದ ಅತಿಕ್ರಮಣಕಾರರು

• **ಕನ್ನಡಪ್ರಭವಾರ್ತೆ** ತುರುವೇಕೆರೆ

ತಾಲೂಕಿನ ದಬ್ಬೇಘಟ್ಟ ಹೋಬಳಿ ಗೂರಲಮಠ ಗ್ರಾಮದ ಸರ್ವೇ ನಂಬರ್130ರಲ್ಲಿನ ಇನಾಂ ಜಮೀನಿನ ಪೂರ್ವ ಮತ್ತು ದಕ್ಷಿಣ ಭಾಗದಲ್ಲಿರುವ ಹದ್ದಿನ ಗಿಡದ ಹಳ್ಳವನ್ನು ಮುಕ್ತಗೊಳಿಸಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಈ ಹದ್ದಿನಗಿಡದ ಹಳ್ಳದ ಮೂಲಕ ಬೇರೆಡೆಗೆ ಸಾಗಲು ನೂರಾರು ರೈತಾರು ಓಡಾಡಲು ಅನುಕೂಲವಾಗಿದೆ. ಆದರೆ ಈ ಜಾಗವನ್ನು ಪಕ್ಕದ ಜಮೀನುದಾರರು ಅಕ್ರಮವಾಗಿ ವಶಪಡಿಸಿಕೊಂಡಿದ್ದಾರೆ. ಜನರು ಓಡಾಡದಂತೆ ಅಲ್ಲಿಗೆ ವಿವಿಧ ಕಲ್ಮಷಗಳನ್ನು ತುಂಬಿ ತೊಂದರೆ ನೀಡುತ್ತಿದ್ದಾರೆ. ಈ ಜಾಗದ ಪಕ್ಕದಲ್ಲಿ ಗ್ರಾಮ ದೇವತೆ ಉಡುಸಲಮ್ಮ ದೇವಿ ದೇವಾಲಯವಿದೆ. ಭಕ್ತರು ತಮ್ಮ ಧಾರ್ಮಿಕ ವಿಧಿ ವಿಧಾನಗಳನ್ನು ಅನುಸರಿಸಲು ಸನಿಹದಲ್ಲೇ ಇರುವ ಕೆರೆಗೆ ಹೋಗಲು ಈ ಹಳ್ಳ ಅಗತ್ಯವಾಗಿದೆ. ಈಗ ಈ ಹಳ್ಳವನ್ನೂ ಮುಚ್ಚಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿದೆ ಎಂದು ಗ್ರಾಮಸ್ಥರು ತಹಸೀಲ್ದಾರ್‌ರಿಗೆ ದೂರು ಸಲ್ಲಿಸಿದ್ದಾರೆ. ಗೂರಲಮಠದ ಗ್ರಾಮಸ್ಥರು ನೀಡಿದ ದೂರಿನ ಮೇರೆಗೆ ಕಂದಾಯ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಸ್ಥಳಕ್ಕೆ ಭೇಟಿ ನೀಡಿದ್ದರು. ಈ ವೇಳೆ ಹದ್ದಿನಗಿಡದ ಹಳ್ಳದ ಪಕ್ಕದ ಜಮೀನಿನ ಮಾಲೀಕರು ಅಧಿಕಾರಿಗಳು ತಮ್ಮ ಕರ್ತವ್ಯ ಮಾಡಲು ಬಿಡದೇ ತಡೆ ಹಿಡಿದರು. ತಮ್ಮ ಜಮೀನಿನ ಅಳತೆ ಮಾಡುವಂತೆ ಇತರೆಯವರ ಜಮೀನನ್ನೂ ಸಹ ಅಳತೆ ಮಾಡಿ. ನಾವೂ ಸಹ ತಹಸೀಲ್ದಾರ್‌ಗೆ ದೂರು ಸಲ್ಲಿಸಿದ್ದೇವೆ. ಅದನ್ಯಾಕೆ ಪರಿಗಣಿಸಿಲ್ಲ ಎಂದು ತಕರಾರು ತೆಗೆದರು. ದಾಖಲೆಯಲ್ಲಿ ತಮ್ಮ ಜಮೀನಿನ ಪಕ್ಕದಲ್ಲಿ ಹಳ್ಳ ಎಂದು ಇದೆ. ಆದರೆ ಗ್ರಾಮದ ಕೆಲವರು ಇಲ್ಲಿ ರಸ್ತೆ ನಿರ್ಮಾಣ ಮಾಡಿಸಿ ನಮಗೆ ತೊಂದರೆ ಕೊಡಬೇಕೆಂದು ಉದ್ದೇಶಿಸಿದ್ದಾರೆ. ಇದರಿಂದ ನಮ್ಮ ಜಮೀನಿಗೆ ತೊಂದರೆಯಾಗುತ್ತದೆ. ಹಾಗಾಗಿ ತಾವು ಇಲ್ಲಿ ರಸ್ತೆ ತೆರವು ಮಾಡಲು ಬಿಡುವುದಿಲ್ಲ ಎಂದು ಹಠ ಹಿಡಿದರು. ಇದರಿಂದ ಅಸಹಾಯಕರಾದ ಸಿಬ್ಬಂದಿ ಹಿರಿಯ ಅಧಿಕಾರಿಗಳಿಗೆ ಈ ಕುರಿತು ವರದಿ ಸಲ್ಲಿಸಿ ಮುಂದೆ ರಸ್ತೆ ತೆರವುಗೊಳಿಸಲು ಸೂಕ್ತ ಕಾನೂನು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಗ್ರಾಮದೇವತೆ ಉಡುಸಲಮ್ಮ ದೇವಾಲಯದ ಆವರಣಕ್ಕೆ ಹೊಂದಿಕೊಂಡಿರುವ ಹದ್ದಿನಗಿಡದ ಹಳ್ಳದ ಪಕ್ಕ ಇರುವ ಜಮೀನು ಈ ದೇವಾಲಯದ ಆಸ್ತಿಯಾಗಿದೆ. ಆದರೆ ಈ ದೇವಾಲಯದಲ್ಲಿ ಪೂಜೆ ಸಲ್ಲಿಸುತ್ತಿರುವ ಜನ ಸಾರ್ವಜನಿಕರಿಗೆ ಹಾಗೂ ದೇವಾಲಯದ ಧಾರ್ಮಿಕ ಕಾರ್ಯಕ್ಕೂ ತೊಂದರೆಯುಂಟು ಮಾಡಿದ್ದಾರೆ. ತಹಸೀಲ್ದಾರ್ ಹಾಗೂ ಭೂಮಾಪನಾ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಸಾರ್ವಜನಿಕರಿಗೆ ರಸ್ತೆ ಬಿಡಿಸಿಕೊಡಬೇಕು. ಅಲ್ಲದೇ ದೇವಾಲಯದ ಆಸ್ತಿಯನ್ನು ತಮ್ಮ ಕುಟುಂಬದ ಹೆಸರಿಗೆ ಮಾಡಿಸಿಕೊಂಡಿದ್ದಾರೆ. ಆ ದಾಖಲೆಯನ್ನು ರದ್ದುಗೊಳಿಸಿ ಆ ಎಲ್ಲಾ ಜಮೀನನ್ನು ದೇವಾಲಯದ ಹೆಸರಿಗೇ ಮಾಡಬೇಕು. ತಪ್ಪಿದಲ್ಲಿ ತಾಲೂಕು ಕಚೇರಿ ಮುಂದೆ ಗ್ರಾಮಸ್ಥರೊಡನೆ ಪ್ರತಿಭಟನೆ ಮಾಡುವುದು ಅನಿವಾರ್ಯವಾಗಲಿದೆ ಎಂದು ದಬ್ಬೇಘಟ್ಟ ಪಿಎಸಿಎಸ್ ಅಧ್ಯಕ್ಷ ಹರೀಶ್ ಮತ್ತು ಗೂರಲಮಠದ ಕೃಷ್ಣಮೂರ್ತಿ ತಾಲೂಕು ಆಡಳಿತವನ್ನು ಆಗ್ರಹಿಸಿದ್ದಾರೆ.



ತುರುವೇಕೆರೆ ತಾಲೂಕು ಗೂರಲಮಠದ ಗ್ರಾಮ ದೇವತೆ ಉಡುಸಲಮ್ಮ ದೇವಾಲಯದ ಬಳಿ ಇರುವ ಹಳ್ಳವನ್ನು ತೆರವುಗೊಳಿಸಲು ಗ್ರಾಮಸ್ಥರು ಆಗ್ರಹಿಸಿದರು.

ಹಕ್ಕಿಪಿಕ್ಕಿ, ಹಂದಿಜೋಗಿ ಜನಾಂಗಕ್ಕೆ 1.5 ಎಕರೆ ವಸತಿ ಜಾಗ ಮಂಜೂರು



• **ಕನ್ನಡಪ್ರಭ ವಾರ್ತೆ** ತುಮಕೂರು

ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಅರಕೆರೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಅರಕೆರೆ ಗ್ರಾಮದ ಹಕ್ಕಿಪಿಕ್ಕಿ ಮತ್ತು ಹಂದಿಜೋಗಿ ಜನಾಂಗದ ಜನರಿಗೆ ನಿವೇಶನ ಕೊಟ್ಟು ಮನೆ ಕಟ್ಟಿಸಿಕೊಡುವ ಸಂಬಂಧ ಶಾಸಕ ಬಿ. ಸುರೇಶ್‌ಗೌಡರು ಸ್ಥಳ ಪರಿಶೀಲನೆ ಮಾಡಿದರು.


ಶಾಸಕರ ಒತ್ತಾಯದ ಮೇರೆಗೆ ಸರ್ಕಾರ ಹಕ್ಕಿಪಿಕ್ಕಿ ಹಾಗೂ ಹಂದಿಜೋಗಿ ಜನಾಂಗದವರಿಗೆ ತಲಾ 1.5 ಎಕರೆ ಜಾಗ ಮಂಜೂರು ಮಾಡಿದ್ದು ಜಾಗ ಪರಿಶೀಲನೆ ಮಾಡಿದರು. ಈ ವಿಚಾರವನ್ನು ಸುರೇಶ್‌ಗೌಡರು ವಿಧಾನಸಭೆಯಲ್ಲಿಯೂ ಪ್ರಸ್ತಾಪ ಮಾಡಿ ಈ ಬಡವರಿಗೆ ಮನೆ ಕಟ್ಟಿಸಿ ಕೊಡಬೇಕಾದ ಅಗತ್ಯವನ್ನು ಪ್ರತಿಪಾದಿಸಿದ್ದರು. ಜಾಗ ಪರಿಶೀಲನೆ ವೇಳೆ ಶಾಸಕ ಸುರೇಶ್‌ಗೌಡರ ಜೊತೆ ತಹಸೀಲ್ದಾರ್ ರಾಜೇಶ್ವರಿ, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮೀನಾರಾಯಣ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಇದ್ದರು. ಈ ಗ್ರಾಮದ ಕೆಲವರು ರೈತರಿಗೆ ಪಡಿತರ ಚೀಟಿ ಇಲ್ಲದೆ ಇರುವ ವಿಚಾರ ಗಮನಕ್ಕೆ ಬಂದು ತಕ್ಷಣ ಅವರಿಗೆ ಪಡಿತರ ಚೀಟಿ ಕೊಡಬೇಕು ಎಂದು ಶಾಸಕರು ಅಧಿಕಾರಿಗಳಿಗೆ ಆದೇಶ ಮಾಡಿದರು.

ತಿಪಟೂರು ಡಿವೈಎಸ್ಪಿ ನೇತೃತ್ವದಲ್ಲಿ ಪೊಲೀಸ್ ಸಿಬ್ಬಂದಿಗೆ ಫೈರಿಂಗ್ ತರಬೇತಿ

ತಿಪಟೂರು: ತಾಲೂಕಿನ ಈರಲಗೆರೆ ಗುಡ್ಡದಲ್ಲಿರುವ ಪೊಲೀಸ್ ಫೈರಿಂಗ್ ರೇಂಜ್‌ನಲ್ಲಿ ಪೊಲೀಸ್ ಸಿಬ್ಬಂದಿಗೆ ಬಂದೂಕು ಬಳಕೆ ಹಾಗೂ ಫೈರಿಂಗ್ ತರಬೇತಿ ನೀಡಲಾಯಿತು. ತಿಪಟೂರು ಡಿವೈಎಸ್ಪಿ ಉಮೇಶ್ ಅವರ ನೇತೃತ್ವದಲ್ಲಿ ನಡೆದ ವಾರ್ಷಿಕ ಫೈರಿಂಗ್ ತರಬೇತಿಯಲ್ಲಿ, ತಿಪಟೂರು ಗ್ರಾಮಾಂತರ ವೃತ್ತ ನಿರೀಕ್ಷಕರಾದ ಚಂದ್ರಶೇಖರ್, ವೆಂಕಟೇಶ್ ಹಾಗೂ ನಗರ ಠಾಣೆ ವೃತ್ತಾಧಿಕಾರಿ ರವಿಕುಮಾರ್‌ಸೇರಿದಂತೆ ಪೊಲೀಸ್ ಸಿಬ್ಬಂದಿ ಭಾಗವಹಿಸಿದರು. ಈ ಸಂದರ್ಭದಲ್ಲಿ ಬಂದೂಕುಗಳನ್ನು ಸುರಕ್ಷಿತವಾಗಿ ಬಳಸುವ ವಿಧಾನ, ನಿಖರ ಗುರಿ ಸಾಧನೆ ಹಾಗೂ ತುರ್ತು ಪರಿಸ್ಥಿತಿಗಳಲ್ಲಿ ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸುವ ತರಬೇತಿಯನ್ನು ನೀಡಲಾಯಿತು. ಪೊಲೀಸ್ ಸಿಬ್ಬಂದಿಯ ಸಾಮರ್ಥ್ಯ ಮತ್ತು ಕಾರ್ಯಕ್ಷಮತೆ ಹೆಚ್ಚಿಸುವ ಉದ್ದೇಶದಿಂದ ಈ ತರಬೇತಿ ಆಯೋಜಿಸಲಾಗಿತ್ತು.

ವಡ್ಡರಹಳ್ಳಿ ಬಳಿ ಬಫರ್ ಡ್ಯಾಂ ನಿರ್ಮಾಣಕ್ಕೆ ರೈತರ ವಿರೋಧ

ಮಿನಿ ವಿಧಾನಸೌಧಕ್ಕೆ ಮುತ್ತಿಗೆ ಹಾಕಿ ಪ್ರತಿಭಟನೆ



ವಡ್ಡರಹಳ್ಳಿ ಸಮೀಪ ಬಫರ್‌ಡ್ಯಾಂ ನಿರ್ಮಾಣ ವಿರೋಧಿಸಿ ಪ್ರತಿಭಟನೆ ನಡೆಸಿದ ರೈತರು.

ಕೊರಟಗೆರೆ: ರಾಜ್ಯ ಸರ್ಕಾರ ವಡ್ಡರಹಳ್ಳಿ ಸಮೀಪ ಎತ್ತಿನಹೊಳೆ ಬಫರ್‌ಡ್ಯಾಂ ನಿರ್ಮಾಣ ಮಾಡುವುದನ್ನು ವಿರೋಧಿಸಿ ರೈತರು ಮಿನಿವಿಧಾನ ಸೌಧಕ್ಕೆ ಮುತ್ತಿಗೆಹಾಕಿ ಗುರುವಾರ ಪ್ರತಿಭಟನೆ ನಡೆಸಿದರು. ಪಟ್ಟಣದ ಪುರಸಭೆ ಮುಂಭಾಗದಿಂದ ಮಿನಿವಿಧಾನಸೌಧ ಕಚೇರಿಯವರೆಗೆ ಕಾಲ್ನಡಿಗೆಯಲ್ಲಿ ತೆರಳಿದ ರೈತರು ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಈ ವೇಳೆ ಮಾತನಾಡಿದ ವಡೇರಹಳ್ಳಿ ರೈತ ಮುಖಂಡ ವಿ.ಪಿ.ನಂಜೇಗೌಡ, ವಡ್ಡರಹಳ್ಳಿ ಬಳಿ ನಿರ್ಮಾಣಕ್ಕೆ ಉದ್ದೇಶ ಮಾಡಿರುವ ಎತ್ತಿನಹೊಳೆ ಯೋಜನೆಯ ಬಫರ್‌ಡ್ಯಾಂ ಅವೈಜ್ಞಾನಿಕ. ನಾವು ನಮ್ಮ ಪ್ರಾಣ ಬೇಕಾದ್ರು ನೀಡ್ತಿವಿ. ಆದರೆ ನಮ್ಮ ಕೃಷಿ ಜಮೀನು ಮಾತ್ರ ಬಫರ್‌ಡ್ಯಾಂಗೆ ನೀಡೋದಿಲ್ಲ. ರಾಜ್ಯ ಸರ್ಕಾರ ಪರಿಶೀಲನೆ ನಡೆಸಿ ರೈತರಿಗೆ ಅನುಕೂಲ ಕಲ್ಪಿಸಬೇಕಿದೆ ಎಂದು ಆಗ್ರಹಿಸಿದರು.

ರೈತ ಮುಖಂಡ ಡಿ.ಹನುಮಂತೇಗೌಡ ಮಾತನಾಡಿ, ದುರ್ಗದಹಳ್ಳಿ, ಬೈರಗೊಂಡ್ಲು ಆಯ್ತು ಈಗ ನಮ್ಮ ವಡೇರಹಳ್ಳಿಗೆ ಬಫರ್‌ಡ್ಯಾಂ ಬಂದಿದೆ. ರೈತರ ಪರವಾನಗಿ ಪಡೆಯದೆ ಏಕಾಏಕಿ ಸರ್ಕಾರದ ನಿರ್ಧಾರಕ್ಕೆ ನಮ್ಮ ವಿರೋಧವಿದೆ. ನಮ್ಮ ಭೂಮಿ ವಿಚಾರಕ್ಕೆ ಬಂದು ನಮ್ಮ ತಾಳ್ಮೆ ಪರೀಕ್ಷೆ ಮಾಡಬೇಡಿ. ಈಗಾಗಲೇ ಸಾಕಷ್ಟು ಜಮೀನಿನನ್ನು ಸರ್ಕಾರ ಕಿತ್ತುಕೊಂಡಿದೆ ಮುಂದೆ ಅದಕ್ಕೆ ಅವಕಾಶ ನೀಡುವುದಿಲ್ಲ ಎಂದು ಕಿಡಿಕಾರಿದರು.

ಪ್ರತಿಭಟನೆಯಲ್ಲಿ ವಡೇರಹಳ್ಳಿ, ನಾಯಕನಪಾಳ್ಯ, ಕಾಟೇನಹಳ್ಳಿ ರೈತರಾದ ಕೆಂಪರಾಜು, ನಂಜುಂಡಯ್ಯ, ವೀರಭದ್ರಯ್ಯ, ಲಕ್ಕಹನುಮಯ್ಯ, ಜಯಣ್ಣ, ಮಾರುತಿ, ಸುಜಾತ, ವಿನೂತ, ಜಯಮ್ಮ, ಗಂಗಮ್ಮ, ಲಕ್ಷಮ್ಮ ಸೇರಿದಂತೆ ಇತರರು ಇದ್ದರು.

ಅನುಷ್ಠಾನ | ಅಧಿಕಾರಿಗಳ ಜೊತೆ ಸಭೆ ನಡೆಸಿದ ಕರ್ನಾಟಕ ರಾಜ್ಯ ಕಾಡುಗೊಲ್ಲರ ಅಭಿವೃದ್ಧಿ ನಿಗಮದ ಅಧ್ಯಕ್ಷ ಮಹೇಶ್ ಹಾರೋಗೆರೆ

ಜಾತಿ ಪ್ರಮಾಣ ಪತ್ರ ವಿಳಂಬವಾಗದಂತೆ ಕ್ರಮವಹಿಸಲು ಸೂಚನೆ

• **ಕನ್ನಡಪ್ರಭ ವಾರ್ತೆ** ತುಮಕೂರು

ಜಾತಿ ಪ್ರಮಾಣ ಪತ್ರ ಇಲ್ಲದೆ ಸರ್ಕಾರದ ವಿವಿಧ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗುತ್ತಿಲ್ಲ. ಆದಕಾರಣ ಜಾತಿ ಪತ್ರಗಳನ್ನು ತ್ವರಿತವಾಗಿ ವಿತರಣೆ ಮಾಡುವಂತೆ ಕರ್ನಾಟಕ ರಾಜ್ಯ ಕಾಡುಗೊಲ್ಲರ ಅಭಿವೃದ್ಧಿ ನಿಗಮದ ಅಧ್ಯಕ್ಷ ಮಹೇಶ್ ಹಾರೋಗೆರೆ ಅಧಿಕಾರಿಗಳಿಗೆ ಸಲಹೆ ನೀಡಿದರು.

ತುಮಕೂರು ಜಿಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳೊಂದಿಗೆ ಜಿಲ್ಲಾ ಮಟ್ಟದ ಕಂದಾಯ ಅಧಿಕಾರಿಗಳಿಗೆ ನಡೆಸಿದ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು

ಕಾಡುಗೊಲ್ಲ ಸಮುದಾಯ ಅತ್ಯಂತ ಹಿಂದುಳಿದ ಒಂದು ಬುಡಕಟ್ಟು ಸಮುದಾಯವಾಗಿದ್ದು ಈ ಜನರಿಗೆ ಸರ್ಕಾರದ ಸವಲತ್ತುಗಳು ಸರಿಯಾದ ರೀತಿಯಲ್ಲಿ ತಲುಪುತ್ತಿಲ್ಲ. ಅವರಿಗೆ ಅಷ್ಟು ಜ್ಞಾನವಿಲ್ಲ. ಸರ್ಕಾರ ಇದನ್ನು ಅರಿತು ಕಾಡುಗೊಲ್ಲ ಸಮುದಾಯಕ್ಕೆಂದೇ ಪ್ರತ್ಯೇಕ ನಿಗಮ ಮಾಡಿದೆ. ಈ ನಿಗಮದ ಮೂಲಕ ವಿವಿಧ ಯೋಜನೆಗಳನ್ನು ಜಾರಿಗೊಳಿಸಲಾಗುತ್ತದೆ. ಆದರೆ ಈ ಜನಕ್ಕೆ ಅಭಿವೃದ್ಧಿ ನಿಗಮದಿಂದ ಸಿಗುವ ಯೋಜನೆಗಳನ್ನು ತಲುಪಿಸಲು ಜಾತಿ ಪ್ರಮಾಣ ಪತ್ರ ಮುಖ್ಯವಾಗಿದ್ದು ಇದು ಇಲ್ಲದೆ ಎಷ್ಟೋ ಜನ ಅರ್ಜಿ ಹಾಕಲು ಸಾಧ್ಯವಾಗುತ್ತಿಲ್ಲ. ಆದ ಕಾರಣ ತಾಲೂಕು ಮಟ್ಟದ ಕಂದಾಯ ಅಧಿಕಾರಿಗಳು, ತಹಸೀಲ್ದಾರ್ ಗಮನಹರಿಸಿ ಶೀಘ್ರ ಜಾತಿ ಪತ್ರ ವಿತರಣೆ ಮಾಡುವಂತೆ ತಿಳಿಸಿದರು.

ರಾಜ್ಯದ ತುಮಕೂರು ಹಾಗೂ ಚಿತ್ರದುರ್ಗದಲ್ಲಿ ಈ ಜನಾಂಗ ಹೆಚ್ಚಿನ ಸಂಖ್ಯೆಯಲ್ಲಿ ಇದ್ದಾರೆ. ಅವರಿಗೆ ಸರಿಯಾದ ಮಾಹಿತಿ ಇಲ್ಲದೆ ಇರುವುದರಿಂದ ಹಾಗೂ ಜಾತಿ ಪ್ರಮಾಣ ಪತ್ರ ಬೇಗನೇ ಸಿಗುತ್ತಿಲ್ಲವಾದ ಕಾರಣ ವಿವಿಧ ಯೋಜನೆಗಳಿಗೆ ಅರ್ಜಿ ಹಾಕುತ್ತಿಲ್ಲ. ಅಧಿಕಾರಿಗಳು ಇದನ್ನು ಗಮನಿಸಬೇಕು. ಸರ್ಕಾರವೂ ಸಹ ಈಗಾಗಲೇ ಸುತ್ತೋಲೆ ಹೊರಡಿಸಿದೆ. ಇದಕ್ಕೆ ತಹಸೀಲ್ದಾರ್‌ರವರು ಹೆಚ್ಚು ಒತ್ತು ನೀಡಬೇಕು ಎಂದರು. ಗಂಗಾಕಲ್ಯಾಣ, ನೇರ ಸಾಲ ಯೋಜನೆ, ಸಾರಥಿ ಯೋಜನೆ ಅಡಿಯಲ್ಲಿ ವಾಹನ ಸೌಲಭ್ಯ, ಅರಿವು ಶೈಕ್ಷಣಿಕ ಯೋಜನೆ, ವಿದೇಶಿ ವ್ಯಾಸಂಗಕ್ಕೆ ಸಾಲ ಹೊಲಿಗೆ ಯಂತ್ರ ಹೀಗೆ ಹಲವು ರೀತಿಯ ಸಾಲ ಯೋಜನೆಗಳಿದ್ದು ಕಾಡುಗೊಲ್ಲ ಜನಾಂಗದವರು ಇದರ ಅದುಪಯೋಗಪಡಿಸಿಕೊಳ್ಳಬೇಕು ಎಂದರು.

ತುಮಕೂರು ಜಿಲ್ಲೆಯ ಸಮಾಜದ ಜನರಿಗೆ ಈ ಮಾಹಿತಿ ನೀಡಲು ಜಿಲ್ಲಾಧಿಕಾರಿಗಳಿಗೆ ತಿಳಿಸಿದಾಕ್ಷಣ ಬೇಗನೇ ತಾಲೂಕು ಮಟ್ಟದ ಅಧಿಕಾರಿಗಳು, ತಹಸಿಲ್ದಾರ್ ಹಾಗೂ ಉಪ ವಿಭಾಗಾಧಿಕಾರಿಗಳ ಸಭೆ ಕರೆದು ಅವರಿಗೆ ಮಾಹಿತಿ ನೀಡಲು ಸಹಕರಿಸಿದ್ದಾರೆ. ಜಿಲ್ಲಾಧಿಕಾರಿಗಳ ಸೂಚನೆಯಂತೆ ತ್ವರಿತವಾಗಿ ಜಾತಿ ಪತ್ರ ವಿತರಿಸಲು ಕ್ರಮ ವಹಿಸಬೇಕು ಎಂದರು. ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಎಲ್ಲ ತಾಲೂಕುಗಳ ತಹಸೀಲ್ದಾರ್ ಜಾತಿ ಪ್ರಮಾಣ ಪತ್ರ ವಿತರಿಸಲು ಗಮನಹರಿಸಬೇಕು. ಪ್ರಮಾಣಪತ್ರ ಇಲ್ಲದೆ ಫಲಾನುಭವಿಗಳಾಗಲು ಸಾಧ್ಯವಾಗುತ್ತಿಲ್ಲ. ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವುದು ನಮ್ಮೆಲ್ಲರ ಕರ್ತವ್ಯವಾಗಬೇಕು. ತಳ ಸಮುದಾಯಗಳ ಜನ ಮೇಲೆ ಬರಬೇಕೆಂದರೆ ಅವರಿಗೆ ಸರ್ಕಾರದ ಯೋಜನೆಗಳು ತ್ವರಿತವಾಗಿ ತಲುಪಬೇಕು ಎಂದರು. ಅಪರ ಜಿಲ್ಲಾಧಿಕಾರಿ ಡಾ. ತಿಪ್ಪೇಸ್ವಾಮಿ, ಉಪವಿಭಾಗಾಧಿಕಾರಿಗಳಾದ ನಾಹಿದಾ ಜಂ ಜಂ ಹಾಗೂ ಎಲ್ಲ ತಾಲೂಕುಗಳ ತಹಸಿಲ್ದಾರರು ಉಪಸ್ಥಿತರಿದ್ದರು.



ತುಮಕೂರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಕಂದಾಯ ಅಧಿಕಾರಿಗಳೊಂದಿಗೆ ಕರ್ನಾಟಕ ರಾಜ್ಯ ಕಾಡುಗೊಲ್ಲರ ಅಭಿವೃದ್ಧಿ ನಿಗಮದ ಅಧ್ಯಕ್ಷ ಮಹೇಶ್ ಹಾರೋಗೆರೆ ಸಭೆ ನಡೆಸಿದರು.

ಸುದ್ದಿ ಸಿಂಚನ

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಪಾವಗಡ: ತಾಲೂಕು ಬಲಿಜ ಸಂಘ ಹಾಗೂ ಶ್ರೀ ಯೋಗಿ ನಾರಾಯಣ ಸ್ವಾಮಿ ಸೇವಾ ಸಮಿತಿಯ ಸಂಯುಕ್ತ ಆಶ್ರಯದಲ್ಲಿ, ತಾಲೂಕಿನಲ್ಲಿ ವಿದ್ಯಾಭ್ಯಾಸ ಮಾಡಿರುವ ಪ್ರತಿಭಾವಂತ ಬಲಿಜ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. 2025-26ನೇ ಸಾಲಿನ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಗಳಲ್ಲಿ ಶೇಕಡಾ 85ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದು ಉತ್ತೀರ್ಣರಾದ ವಿದ್ಯಾರ್ಥಿಗಳು ಈ ಪುರಸ್ಕಾರಕ್ಕೆ ಅರ್ಜಿ ಸಲ್ಲಿಸಬಹುದು. ಆಸಕ್ತ ವಿದ್ಯಾರ್ಥಿಗಳು ತಮ್ಮ ಅಂಕಪಟ್ಟಿ ಹಾಗೂ ಇತ್ತೀಚಿನ ಭಾವಚಿತ್ರದೊಂದಿಗೆ ಮೇ 15ರೊಳಗಾಗಿ ಪಾವಗಡದ ಯೋಗಿ ನಾರಾಯಣ ದೇವಸ್ಥಾನದ ಅರ್ಚಕರಾದ ಶಿವಕುಮಾರ್‌ಅವರಿಗೆ ಸಲ್ಲಿಸಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ರಾಘವೇಂದ್ರ ಗುರಪ್ಪ (9353777924), ಸತ್ಯ ಲೋಕೇಶ್ (9483158169), ವಿನಯ್ ಬಾಬು ಪ್ರಾಂಶುಪಾಲರು (9880693599), ಸುರೇಶ್ ಗುರಪ್ಪ (9902538277) ಹಾಗೂ ಪೂಜಾರಿ ಶಿವಕುಮಾರ್(9880863884) ಅವರನ್ನು ಸಂಪರ್ಕಿಸಲು ಕೋರಲಾಗಿದೆ.

ಬಿಎಸ್‌ವೈ ಕಾರ್ಯಕ್ರಮಕ್ಕೆ 100 ಬಸ್: ದಿಲೀಪ್

ಗುಬ್ಬಿ: ಮಾಜಿ ಮುಖ್ಯಮಂತ್ರಿ ಬಿ.ಎಸ್ .ಯಡಿಯೂರಪ್ಪ ಅವರ ಅಭಿಮಾನೋತ್ಸವ ಸಮಾರಂಭ 9ರಂದು ಮಧ್ಯಾಹ್ನ 2ಗಂಟೆಗೆ ಚಿತ್ರದುರ್ಗದಲ್ಲಿ ನಡೆಯಲಿದ್ದು ಕಾರ್ಯಕ್ರಮಕ್ಕೆ ಗುಬ್ಬಿ ತಾಲೂಕಿನ ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದು ಬಿಜೆಪಿ ಮುಖಂಡ ಎಸ್.ಡಿ.ದಿಲೀಪ್ ಕುಮಾರ್‌ತಿಳಿಸಿದರು. ಗುಬ್ಬಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ತಾಲೂಕಿನಿಂದ ಸುಮಾರು ನೂರು ಬಸ್ ಹಾಗೂ ಹತ್ತು ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಭಾಗವಹಿಸಲಿ ದ್ದಾರೆ.ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಿಂದ ಕಾರ್ಯಕರ್ತರು ಪಕ್ಷಾತೀತವಾಗಿ ಕಾರ್ಯಕ್ರಮಕ್ಕೆ ಹೊರಡಲಿದ್ದಾರೆ. ಈ ವೇಳೆ ಬಿಜೆಪಿ ಮಂಡಲ ಅಧ್ಯಕ್ಷ ಬಲರಾಮಯ್ಯ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ರವೀಶ್, ಸಾಗರನಹಳ್ಳಿ ವಿಜಯ್ ಕುಮಾರ್‌ಮುಖಂಡರಾದ ಬಸವರಾಜು, ನಂಜೇಗೌಡ್ರು , ಎಚ್.ಟಿ.ಭೈರಪ್ಪ , ವಿದ್ಯಾಸಾಗರ್ ಕಾರ್ಯಕರ್ತರು ಭಾಗವಹಿಸಿದ್ದರು.

ನಾಟಕ ಪ್ರದರ್ಶನ ಇಂದು

ಗುಬ್ಬಿ: ತಾಲೂಕು ಲಕ್ಕೆನಹಳ್ಳಿ ಗೊಲ್ಲರಟ್ಟಿ ಗ್ರಾಮದಲ್ಲಿ 8 ರಂದು ಶುಕ್ರವಾರ ರಾತ್ರಿ 8 ಗಂಟೆಗೆ ಶ್ರೀ ಕ್ಯಾತ ಲಿಂಗೇಶ್ವರ ಸ್ವಾಮಿ ಶ್ರೀ ಈರಕಾಳಣ್ಣ ಸ್ವಾಮಿ ಕೃಪಾ ನಾಟಕ ಮಂಡಳಿ ಅವರಿಂದ ಕುರುಕ್ಷೇತ್ರ ಅಥವಾ ಧರ್ಮ ರಾಜ್ಯ ಸ್ಥಾಪನ ಎಂಬ ಪೌರಾಣಿಕ ನಾಟಕ ಪ್ರದರ್ಶನ ನಡೆಯಲಿದೆ ಎಂದು ಕಲಾಭಿಮಾನಿಗಳು ತಿಳಿಸಿದ್ದಾರೆ.

ತಾಂತ್ರಿಕತೆಯಿಂದ ಹೈನುಗಾರಿಕೆ ಮಾಡಿದರೆ ಕ್ಷೀರ ಕ್ರಾಂತಿ

ಹಾಲು ಪರಿವೀಕ್ಷಕರಿಗೆ ತರಬೇತಿ ಪ್ರಮಾಣಪತ್ರ, ವಿದ್ಯಾರ್ಥಿಗಳಿಗೆ ಚೆಕ್ ವಿತರಣೆ ಮಾಡಿದ ಎಸ್.ಆರ್.ಗೌಡ

• **ಕನ್ನಡಪ್ರಭ ವಾರ್ತೆ** ಶಿರಾ

ಗ್ರಾಮೀಣ ಪ್ರದೇಶದಲ್ಲಿ ಯುವಕರು ಉದ್ಯೋಗಕ್ಕಾಗಿ ವಲಸೆ ಹೋಗುವುದನ್ನು ತಪ್ಪಿಸಬೇಕೆಂಬ ಉದ್ದೇಶದಿಂದ ಹೈನುಗಾರಿಕೆಗೆ ಹೆಚ್ಚು ಪ್ರೋತ್ಸಾಹ ನೀಡಲಾಗುತ್ತಿದೆ. ಯುವಕರು ಬೇರೆ ಕಡೆ ಕೆಲಸಕ್ಕೆ ಹೋಗುವ ಬದಲು ಹೈನುಗಾರಿಕೆ ಮಾಡಿ ಹೆಚ್ಚು ಹಾಲು ಉತ್ಪಾದಿಸಿ ನೀವೆ ಇನ್ನೊಬ್ಬರಿಗೆ ಉದ್ಯೋಗ ನೀಡಿ. ಹೈನುಗಾರಿಕೆಯನ್ನು ತಾಂತ್ರಿಕತೆ ಉಪಯೋಗಿಸಿಕೊಂಡು ಮಾಡಿದರೆ ಕ್ಷೀರ ಕ್ರಾಂತಿ ಮಾಡಬಹುದು ಎಂದು ತುಮಕೂರು ಹಾಲು ಒಕ್ಕೂಟದ ನಿರ್ದೇಶಕ ಎಸ್ ಆರ್‌ಗೌಡ ಹೇಳಿದರು.

ಅವರು ಗುರುವಾರ ನಗರದ ನಂದಿನಿ ಕ್ಷೀರ ಭವನದಲ್ಲಿ ತುಮಕೂರು ಹಾಲು ಒಕ್ಕೂಟದಿಂದ ವತಿಯಿಂದ ಹಮ್ಮಿಕೊಂಡಿದ್ದ ಹಾಲು ಪರೀಕ್ಷಕರಿಗೆ ತರಬೇತಿ ಹಾಗೂ ವಿದ್ಯಾರ್ಥಿಗಳಿಗೆ ಚೆಕ್ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಶಿರಾ ತಾಲೂಕಿನಲ್ಲಿ ಹಾಲಿನ ಉತ್ಪಾದನೆ ಗಣನೀಯವಾಗಿ ಹೆಚ್ಚಳವಾಗಿದೆ. ಪ್ರತಿ ನಿತ್ಯ ಸುಮಾರು 85 ಸಾವಿರ ಲೀಟರ್‌ಹಾಲು ಉತ್ಪಾದನೆ ಆಗುತ್ತಿದೆ. ಇದು ಉತ್ತಮ ಸಾಧನೆ. ಇದಕ್ಕೆ ಎಲ್ಲರ ಶ್ರಮ ಇದೆ. ಹಾಲು ಹೆಚ್ಚು ಉತ್ಪಾದನೆಯಿಂದ ರೈತರಿಗೆ ಹಣ ಬರುತ್ತದೆ ಇದರಿಂದ ನೆಮ್ಮದಿ ಜೀವನ ನಡೆಸಬಹುದು. ಇದರಲ್ಲಿ ಶ್ರಮಕ್ಕೆ ತಕ್ಕ ಪ್ರತಿಫಲ ಇದೆ. ಉತ್ತಮ ರೀತಿಯಲ್ಲಿ ಹೈನುಗಾರಿಕೆ ಮಾಡಿದರೆ ತಿಂಗಳಿಗೆ 2 ರಿಂದ 3 ಲಕ್ಷ ರೂಪಾಯಿ ಸಂಪಾದಿಸಬಹುದು. ಹೈನುಗಾರಿಕೆಯಿಂದ ಕೃಷಿಗೂ ಅನುಕೂಲವಾಗುತ್ತದೆ. ಕಾಲ ಕಾಲಕ್ಕೆ ಬೆಳೆ ಬೆಳೆಯಲು ಹೈನುಗಾರಿಕೆಯಿಂದ ಹಣ ಬರುತ್ತದೆ ಎಂದರು.

ತುಮಕೂರು ಹಾಲು ಒಕ್ಕೂಟದ ವ್ಯವಸ್ಥಾಪಕ ಡಾ.ಟಿ ವಿ ಶ್ರೀನಿವಾಸ್ ಮಾತನಾಡಿ ಹೈನುಗಾರರಿಗೆ ಸವಲತ್ತು ನೀಡುವಲ್ಲಿ ಶಿರಾ ತಾಲೂಕು ಇತರ ತಾಲೂಕುಗಳಿಗೆ ಮಾದರಿಯಾಗಿದೆ. ರೈತರು ಗುಣಮಟ್ಟದ ಹಾಲು ಉತ್ಪಾದನೆ ಮಾಡಿ ಹೆಚ್ಚು ಹಣ ಪಡೆಯಿರಿ ಎಂದರು. ಕಾರ್ಯಕ್ರಮದಲ್ಲಿ ಸುಮಾರು 50 ವಿದ್ಯಾರ್ಥಿಗಳಿಗೆ ಸುಮಾರು 5 ಲಕ್ಷ ರು.ಗಳ ವಿದ್ಯಾರ್ಥಿ ವೇತನ ಚೆಕ್ ಹಾಗೂ ಹೈನುಗಾರಿಕೆಯಲ್ಲಿ ಹಿಂದುಳಿದು ನಷ್ಟದಲ್ಲಿದ್ದ ದೊಡ್ಡಬಾಣಗೆರೆ ಹಾಲು ಉತ್ಪಾದಕರ ಸಂಘದ ಪುನಶ್ಚೇತನಕ್ಕಾಗಿ ಸುಮಾರು 2 ಲಕ್ಷ ರೂಗಳ ಬಡ್ಡಿ ರಹಿತ ಸಾಲದ ಚೆಕ್ ವಿತರಿಸಲಾಯಿತು. ಈ ವೇಳೆ ತುಮುಲ್ ಉಪ ವ್ಯವಸ್ಥಾಪಕ ಗಿರೀಶ್, ವಿಸ್ತರಣಾಧಿಕಾರಿ ಚೈತ್ರ, ತುಮಕೂರು ಹಾಲು ಒಕ್ಕೂಟದ ಅಪರ ನಿರ್ದೇಶಕ ಡಾ. ರಾಘವೇಂದ್ರ, ಫಕ್ರುದ್ದೀನ್ ಬಾಬು, ಪಿ ಎಲ್ ಡಿ ಬ್ಯಾಂಕ್ ಉಪಾಧ್ಯಕ್ಷ ಅಜ್ಜಣ್ಣ, ನೇಜಂತಿ ಸಂಘದ ಅಧ್ಯಕ್ಷ ರವಿ ಗೌಡ, ಪ್ರಕಾಶ, ಮೋಹನ ಹಾಜರಿದ್ದರು.



ಶಿರಾ ನಗರದ ನಂದಿನಿ ಕ್ಷೀರ ಭವನದಲ್ಲಿ ತುಮಕೂರು ಹಾಲು ಒಕ್ಕೂಟದ ವತಿಯಿಂದ ಹಾಲು ಪರೀಕ್ಷಕರಿಗೆ ತರಬೇತಿ, ವಿದ್ಯಾರ್ಥಿಗಳಿಗೆ ಚೆಕ್ ವಿತರಣೆ ಕಾರ್ಯಕ್ರಮ ನಡೆಯಿತು.

25 ಕೋಟಿ ವೆಚ್ಚದಲ್ಲಿ ಹಾಸ್ಟೆಲ್ ನಿರ್ಮಾಣ

ಹೈನುಗಾರರ ಹೆಣ್ಣುಮಕ್ಕಳಿಗೆ ಉತ್ತಮ ಶಿಕ್ಷಣ ಪಡೆಯಲು ತುಮಕೂರು ಹಾಲು ಒಕ್ಕೂಟದಿಂದ ಹಾಸ್ಟೆಲ್ ವ್ಯವಸ್ಥೆ ಮಾಡಲು 25 ಕೋಟಿ ರುಗಳ ವೆಚ್ಚದಲ್ಲಿ ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಿಸಲಾಗುತ್ತಿದ್ದು, ಈ ವಿದ್ಯಾರ್ಥಿ ನಿಲಯದಲ್ಲಿ ಸುಮಾರು 500 ಜನ ಹೆಣ್ಣು ಮಕ್ಕಳಿಗೆ ವ್ಯವಸ್ಥೆ ಮಾಡಲಾಗುತ್ತಿದೆ. ಕಟ್ಟಡ ಕಾಮಗಾರಿ ಶೀಘ್ರದಲ್ಲಿ ಕಟ್ಟಡ ಪೂರ್ಣಗೊಳ್ಳಲಿದೆ ಎಂದು ಎಸ್.ಆರ್.ಗೌಡ ಹೇಳಿದರು.

ಬಿಎಸ್‌ವೈ ಅಭಿಮಾನೋತ್ಸವ: ಯಶಸ್ವಿಗೆ ಮನವಿ


ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಅಭಿಮಾನೋತ್ಸವ ಸಮಾರಂಭದ ಕುರಿತು ಬಿಜೆಪಿ ಮುಖಂಡರು ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ತುಮಕೂರು

9 ರಂದು ಚಿತ್ರದುರ್ಗದಲ್ಲಿ ಹಮ್ಮಿಕೊಂಡಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪಅವರಅಭಿಮಾನೋತ್ಸವಸಮಾರಂಭವನ್ನು ಅದ್ದೂರಿಯಾಗಿ ಯಶಸ್ವಿಗೊಳಿಸಲು ನಿರ್ಧರಿಸಲಾಗಿದ್ದು, ಈ ಕಾರ್ಯಕ್ರಮಕ್ಕೆ ತುಮಕೂರು ಜಿಲ್ಲೆಯಿಂದ 50ಸಾವಿರ ಜನ ಭಾಗವಹಿಸಲು ಈಗಾಗಲೇ ಸಿದ್ಧತೆ ನಡೆಸಿರುವುದಾಗಿ ಜಿಲ್ಲಾ ಬಿಜೆಪಿ ಮುಖಂಡರು ತಿಳಿಸಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖಂಡರು, 9 ರಂದು ಚಿತ್ರದುರ್ಗದಲ್ಲಿ ಬೃಹತ್ ಸಮಾವೇಶ ಆಯೋಜಿಸಲಾಗಿದ್ದು, ಮಧ್ಯಾಹ್ನ 1.30ಕ್ಕೆ ಕಾರ್ಯಕ್ರಮ ಆರಂಭವಾಗಲಿದೆ. 3 ಗಂಟೆಯ ವೇಳೆಗೆ ಅಮಿತ್ ಷಾ ಅವರು ಆಗಮಿಸಲಿದ್ದಾರೆ.

ತುಮಕೂರಿನಿಂದ ಬೆಳಗ್ಗೆಯೇ ಹೊರಟು ಮಧ್ಯಾಹ್ನದ ವೇಳೆಗೆ ಸಮಾರಂಭದ ಬಳಿ ಸೇರುತ್ತೇವೆ. 7 ತಾಲೂಕುಗಳ 50 ಸಾವಿರ ಜನರಿಗಾಗಿ ಒಂದು ಸಾವಿರ ಬಸ್‌ಗಳನ್ನು ನಿಯೋಜಿಸಲಾಗಿದೆ. ಈಗಾಗಲೇ ನಿಗದಿಪಡಿಸಲಾಗಿರುವ ಬಸ್‌ಗಳಲ್ಲಿ ಜನ ಚಿತ್ರದುರ್ಗಕ್ಕೆ ತೆರಳಲಿದ್ದಾರೆ ಎಂದು ವಿವರಿಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಹೆಬ್ಬಾಕ ರವಿ ಶಂಕರ್‌ಮಾತನಾಡಿ, ನಮ್ಮೆಲ್ಲರ ಹಿರಿಯರು, ಪಕ್ಷಕ್ಕಾಗಿ ದುಡಿದ ಬಿ.ಎಸ್.ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮ ಯಶಸ್ವಿಗೆ ನಾವೆಲ್ಲ ಒಟ್ಟಾಗಿ ಶ್ರಮಿಸುತ್ತಿದ್ದು, ಒಂದು ಸಾವಿರ ಬಸ್‌ಗಳಲ್ಲದೆ, ಪಕ್ಷದ ಮುಖಂಡರು, ವಿವಿಧ ಸಂಘ ಸಂಸ್ಥೆಗಳ ವಾಹನಗಳೂ ಸೇರಿದಂತೆ ಇನ್ನೂ ಹೆಚ್ಚಿನ ವಾಹನ ಮತ್ತು ಜನ ಸೇರುವ ನಿರೀಕ್ಷೆ ಇದೆ ಎಂದರು.

ಗ್ರಾಮಾಂತರ ಶಾಸಕ ಬಿ.ಸುರೇಶ್ ಗೌಡ ಮಾತನಾಡಿ ದಕ್ಷಿಣ ಭಾರತದಲ್ಲಿ ಬಿಜೆಪಿ ಅಧಿಕಾರಕ್ಕೆ ತರಲು ಬಿ.ಎಸ್.ಯಡಿಯೂರಪ್ಪ ಅವರ ಪರಿಶ್ರಮ ಅಪಾರ. ಮುನಿಸಿಪಲ್ ಸದಸ್ಯನಿಂದ ಹಿಡಿದು ಮುಖ್ಯ ಮಂತ್ರಿಯತನಕ ಅವರ ಹೋರಾಟ ಅವಿಸ್ಮರಣೀಯ. ಅವರ ಕಾಲದಲ್ಲಿ ಜಾರಿಗೆ ತಂದ ಯೋಜನೆಗಳನ್ನು ಜನ ಈಗಲೂ ಸ್ಮರಿಸುತ್ತಾರೆ ಎಂದು ವಿವರಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ನಗರ ಶಾಸಕ ಜಿ.ಬಿ.ಜ್ಯೋತಿಗಣೇಶ್, ಪಕ್ಷದ ಮುಖಂಡರುಗಳಾದ ವೈ.ಎಚ್.ಹುಚ್ಚಯ್ಯ, ಶಿವಕುಮಾರ ಸ್ವಾಮಿ, ವೇದಮೂರ್ತಿ, ಜಗದೀಶ್ ಮತ್ತಿತರರು ಉಪಸ್ಥಿತರಿದ್ದರು.

10ರಂದು ಹೆಗ್ಗೆರೆಯಲ್ಲಿ ಆರೋಗ್ಯ ತಪಾಸಣಾ ಶಿಬಿರ

ತುರುವೇಕೆರೆ: ತಾಲೂಕಿನ ಹೆಗ್ಗೆರೆಯ ಶ್ರೀ ವೆಂಕಟೇಶ್ವರಸ್ವಾಮಿ ದೇವಾಲಯದ ಆವರಣದಲ್ಲಿ ಮೇ 10ರಂದು ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ ಎಂದು ಲಯನ್ಸ್ ಕ್ಲಬ್ ನ ಅಧ್ಯಕ್ಷ ಎಚ್.ಎನ್.ಪರಮೇಶ್ವರಯ್ಯ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಲಯನ್ಸ್ ಕ್ಲಬ್, ಕಲ್ಪತರು ಚಾರಿಟಬಲ್ ಟ್ರಸ್ಟ್, ಬಿ ಡಬ್ಲ್ಯು ಲಯನ್ಸ್ ಹಾಸ್ಪಿಟಲ್ ಬೆಂಗಳೂರು, ಜಿಲ್ಲಾ ಅಂಧತ್ವ ನಿವಾರಣಾ ಕೇಂದ್ರ, ತಾಲೂಕು ಆರೋಗ್ಯ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಜವರಪ್ಪಸ್ವಾಮಿ ಸ್ಮರಣಾರ್ಥ ಉಚಿತ ಕಣ್ಣಿನ ತಪಾಸಣೆ, ಮತ್ತು ಶಸ್ತ್ರ ಚಿಕಿತ್ಸಾ ಶಿಬಿರ, ರಕ್ತದೊತ್ತಡ, ಶುಗರ್‌ಎಚ್.ಬಿಎ1ಸಿ, ಬೋನ್ ಮಿನರಲ್ ಡೆನ್ಸಿಟಿ, ಪಿ.ಎಫ್.ಟಿ ಥೈರಾಯಿಡ್ ಸೇರಿದಂತೆ ವಿವಿಧ ರೋಗಗಳಿಗೆ ಸಂಬಂಧಿಸಿದಂತೆ ತಪಾಸಣಾ ಶಿಬಿರ ಬೆಳಿಗ್ಗೆ 9ಗಂಟೆಯಿಂದ ಏರ್ಪಡಿಸಲಾಗಿದೆ ಎಂದರು.

ಗ್ರಾಮಾಂತರ ಪ್ರದೇಶದಲ್ಲಿ ಇಂತಹ ಆರೋಗ್ಯ ತಪಾಸಣಾ ಶಿಬಿರ ಆಯೋಜನೆ ಮಾಡುತ್ತಿರು ವುದರಿಂದ ಗ್ರಾಮಾಂತರ ಜನರಿಗೆ ತುಂಬಾ ಅನುಕೂಲವಾಗಲಿದೆ. ಕಾರ್ಯಕ್ರಮವನ್ನು ವೆಂಕಟೇಶ್ವರ ಸೇವಾ ಟ್ರಸ್ಟ್ ಅಧ್ಯಕ್ಷ ಎಚ್. ಎನ್. ಗಂಗಾಧರಯ್ಯ ಉದ್ಘಾಟಿಸುವರು. ಕಾರ್ಯಕ್ರಮದಲ್ಲಿ ಡಾ.ಚೌದ್ರಿ ನಾಗೇಶ್, ಡಾ.ಹರ್ಷಿತ್, ಎಚ್. ಆರ್.ರಂಗನಾಥ್, ಡಾ.ಎ.ನಾಗರಾಜು, ಕೀಲು ಮತ್ತು ಮೂಳೆ ತಜ್ಞರಾದ ಡಾ.ಸುನಿಲ್ ಕುಮಾರ್, ಮಾರ್ಕೆಟಿಂಗ್ ಆಫೀಸರ್ಸ್ ಗಳಾದ ಸುನಿಲ್ ಕುಮಾರ್, ಶಮ್ಸ್ ಭಾಗವಹಿಸುವರು ಎಂದು ಅವರು ತಿಳಿಸಿದರು.

